# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮನಸ್ಸು ನಿನ್ನನ್ನು ನಿಯಂತ್ರಿಸುವ ಮೊದಲು ಮನಸ್ಸನ್ನು ನೀನು ನಿಯಂತ್ರಣದಲ್ಲಿಟ್ಟುಕೊಳ್ಳು.. ಸೂರ್ಯ ಚಂದ್ರರಂತೆ ಜಗತ್ತಿಗೆ ನೀನು ಬೆಳಕಾಗುವುದು ಬೇಡ. ನಿನ್ನ ಬದುಕಿಗೆ ನೀನು ಬೆಳಕಾಗು ಸಾಕು.. ಆಗ ನಿನ್ನ ಬದುಕು ಧನ್ಯ.. ಒಂಟಿಯಾದೆ ಎಂದು ಕೊರಗಬೇಡ ನೀನು ಬರುವಾಗಲು ಒಂಟಿ. ಹೋಗುವಾಗಲು ಒಂಟಿ.. ನೀನು ಒಂಟಿಯಾದಾಗಲೇ ನಿನ್ನ ಸಾಮರ್ಥ್ಯ ತೋರಿಸುವ ಸಮಯ ಬರುವುದು..


**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 24-01-2025 to 30-01-2025 ಬೆಲೆ: 7-00 ಸಂಪುಟ–4 ಸಂಚಿಕೆ–31 ಪುಟಗಳು–6










ಮಂಗಳೂರಿನ ಕದ್ರಿ ಉದ್ಯಾನವನದಲ್ಲಿ ಇಂದಿನಿಂದ 26ರವರೆಗೆ ಫಲಪುಷ್ಪ ಪ್ರದರ್ಶನ ನಡೆಯಲಿದ್ದು, ಈ ಬಾರಿಯ ಪ್ರದರ್ಶನದಲ್ಲಿ ಹೂವುಗಳಿಂದ ತಯಾರಿಸಲಾದ 22 ಅಡಿ ಎತ್ತರದ ಐಫೆಲ್ ಟವರ್ ವಿಶೇಷ ಆಕರ್ಷಣೆಯಾಗಿದೆ. 12 ಅಡಿ ಸುತ್ತಳತೆಯಲ್ಲಿ ಅಂದಾಜು 2 ಲಕ್ಷ ವಿವಿಧ ಹೂವುಗಳಿಂದ ಈ ಟವರ್ ಸಿಂಗಾರಗೊಂಡಿದೆ. ಸಿರಿಧಾನ್ಯದಲ್ಲಿ ಮತ್ತು ಅಲಂಕಾರಿಕ ಎಲೆಗಳಿಂದ ಕಂಬಳ ಕೋಣದ ಮಾದರಿಯನ್ನು 5 ರಿಂದ 6 ಅಡಿ ಸುತ್ತಳತೆಯ ತಯಾರಿಸಿ ಪ್ರದರ್ಶಿಸಲಾಗುತ್ತಿದೆ. ಸುಮಾರು 20,000 ಸಂಖ್ಯೆಯ 30ಕ್ಕೂ ಹೆಚ್ಚು ವಿವಿಧ ಜಾತಿಯ ಹೂವುಗಳಾದ ಸಾಲಿಯ, ಸೇವಂತಿಗೆ, ಚಂಡು ಹೂ, ಜೇನಿಯಾ, ಡಯಾಂಥಸ್, ಆಸ್ಟರ್, ವಿಂಕಾ ರೋಸಿಯಾ, ಡೇಲಿಯಾ, ಪೆಟೂನಿಯಾ, ಟೊರಿನೊ ಮತ್ತಿತರ ಹೂವುಗಳನ್ನು ಕುಂಡದಲ್ಲಿ ಜೋಡಿಸಲಾಗಿದೆ.

## ಡಾಲಿ ಮಂಗಳೂರಿನವರಾಗಿದ್ರೆ ಅಂಗಡಿ ಧ್ವಂಸ ಮಾಡಲಾಗುತ್ತಿತ್ತು: ರಾಜ್ ಬಿ ಶೆಟ್ಟಿ



**ಮಂಗಳೂರು:** ಲಾಲ್‌ಬಾಗ್ ಸ್ಟ್ರೀಟ್ ಫುಡ್ ಫೆಸ್ಟ್‌ಗೆ ಬೀದಿ ಬದಿ ಚಹಾ ಮಾರಾಟಗಾರ ಡಾಲಿ ಚಾಯ್ ವಾಲಾ ಅವರನ್ನು ಅತಿಥಿಯಾಗಿ ಆಹ್ವಾನಿಸಲಾಗಿದೆ. ಆದರೆ, ಡಾಲಿ ಮಂಗಳೂರಿನವರಲ್ಲ ಎಂಬುವುದು ಸಂತೋಷದ ವಿಷಯ. ಒಂದು ವೇಳೆ ಅವರು ಮಂಗಳೂರಿನವರಾಗಿದ್ದರೆ ಅವರ ಅಂಗಡಿಗಳನ್ನು ಧ್ವಂಸ ಮಾಡಲಾಗುತ್ತಿತ್ತು ಎಂದು ಖ್ಯಾತ ನಟ, ನಿರ್ದೇಶಕ ರಾಜ್ ಬಿ ಶೆಟ್ಟಿ ತನ್ನ ಇನ್ಸ್ಟಾಗ್ರಾಂ ಸ್ಟೇಟಸ್‌ನಲ್ಲಿ ಬರೆದುಕೊಂಡಿರುವುದು ವೈರಲ್ ಆಗುತ್ತಿದೆ. ಮಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇತ್ತೀಚೆಗೆ 'ಟೈಗರ್ ಕಾರ್ಯಾಚರಣೆ' ನಡೆಸಿ ಬೀದಿ ಬದಿಯಲ್ಲಿ ಟೀ, ಕಾಫಿ, ಚುರುಮುರಿ, ಆಮ್ಲೆಟ್ ವ್ಯಾಪಾರ ಮಾಡುತ್ತಿದ್ದ ಅಂಗಡಿಗಳನ್ನು ತೆರವುಗೊಳಿಸಲಾಗಿತ್ತು. ಮೇಯರ್ ಟ್ರಾಫಿಕ್ ಕಿರಿಕಿರಿ, ಪಾರ್ಕಿಂಗ್ ಸಮಸ್ಯೆ ಫುಟ್ ಪಾತ್ ಅತಿಕ್ರಮಣ ತೆರವು ಎಂಬ ನೆಪಗಳನ್ನು ನೀಡಿ ಜನಸಾಮಾನ್ಯರ **3ನೇ ಪುಟಕ್ಕೆ**

## ಸವಾಲಾಗಿ ಸ್ವೀಕರಿಸಿದಾಗ ಯಶಸ್ಸು: ಕೃಷ್ಣ ಪಾಲೆಮಾರ್



**ಮಂಗಳೂರು:** ನನ್ನ ಉದ್ದಿಮೆಯಲ್ಲಿ ಮೂರು ಬಾರಿ ಸಂಪೂರ್ಣವಾಗಿ ಸೋತಿದ್ದೇನೆ. ಆದರೆ ಊರು ಬಿಟ್ಟಿಲ್ಲ, ಆದರೆ ಮುಂದೆ ಇದರಿಂದ ಹೊರಬರಲಿದ್ದೇನೆ ಎಂಬ ಆತ್ಮವಿಶ್ವಾಸದೊಂದಿಗೆ ಸವಾಲನ್ನು ಸ್ವೀಕರಿಸಿ ಮುಂದೆ ಬಂದಿದ್ದೇನೆ. ಹಾಗಾಗಿ ಜೀವನದಲ್ಲಿ ಎದುರಾಗುವ ಸೋಲು ಹಾಗೂ ಕಷ್ಟಗಳನ್ನು ಸ್ವೀಕರಿಸುವ ಎದೆಗಾರಿಕೆ ನಮ್ಮಲ್ಲಿ ಇದ್ದಾಗ ಯಶಸ್ಸು ಗಳಿಸಲು ಸಾಧ್ಯವಾಗುತ್ತದೆ ಎಂದು ಮಾಜಿ ಸಚಿವ, ಲ್ಯಾಂಡ್ ಲಿಂಕ್ಸ್ ಸಂಸ್ಥೆಯ ಸಿಇಒ ಕೃಷ್ಣ ಜೆ. ಪಾಲೆಮಾರ್ ಹೇಳಿದರು. ಪತ್ರಿಕಾ ಭವನದಲ್ಲಿ ಗೌರವ ಅತಿಥಿ ಸನ್ಮಾನ ಸ್ವೀಕರಿಸಿದ ಅವರು ತಮ್ಮ ಬದುಕಿನ ಸೋಲು ಗೆಲುವಿನ ಹಾದಿಯನ್ನು ತೆರೆದಿಟ್ಟರು. ತಾವು ಬಯಸಿದ ಅಂಕಗಳು ದೊರಕಿಲ್ಲ ಎಂಬ ಕಾರಣಕ್ಕೆ ವಿದ್ಯಾರ್ಥಿಗಳು ಆತ್ಮಹತ್ಯೆಗೆ ಶರಣಾಗುವುದನ್ನು ನಾವು ಕಾಣುತ್ತಿದ್ದೇವೆ. ಆದರೆ ಜೀವನದಲ್ಲಿ ಎದುರಾಗುವ ಕಷ್ಟಗಳನ್ನು ಆತ್ಮಸ್ಥೈರ್ಯದಿಂದ ಎದುರಿಸುವ ಮನೋಸ್ಥೈರ್ಯವನ್ನು ಬೆಳೆಸಿಕೊಳ್ಳಬೇಕು. ನಮ್ಮ ದುಡಿಮೆಯ ಲಾಭಾಂಶದಲ್ಲಿ ಸಮಾಜಕ್ಕೂ ದೊರಕಬೇಕೆಂಬ ನಿಟ್ಟಿನಲ್ಲಿ ಈವರೆಗೂ ವ್ಯವಹಾರ ನಡೆಸಿಕೊಂಡು ಬಂದಿದ್ದೇನೆ. ಶಾಲೆಗೆ ಹೋಗುತ್ತಿದ್ದ ಸಂದರ್ಭ ಮೋರ್ಗನ್ಸ್‌ಗೇಟ್‌ನ **3ನೇ ಪುಟಕ್ಕೆ**

## ಕೂಗಿದರೆ ರಾಜಕಾರಣದಲ್ಲಿ ಬದಲಾವಣೆ ಆಗಿಬಿಡುತ್ತಾ –ಕೆ.ಜೆ.ಜಾರ್ಜ್



**ವಿಜಯಪುರ:** ಯಾರೋ ಕೂಗಿದ ಕೂಡಲೇ ರಾಜಕಾರಣದಲ್ಲಿ ಬದಲಾವಣೆ ಆಗಿಬಿಡುತ್ತಾ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಪ್ರಶ್ನಿಸಿದ್ದಾರೆ. ಮುಂದಿನ ಸಿಎಂ ಡಿಕೆಶಿ ಎಂದು ಸಿದ್ದರಾಮಯ್ಯ ಎದುರು ಕೂಗಿದ್ದು ಸಿದ್ದರಾಮಯ್ಯಗೆ ಅವಮಾನ ಆಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ. ಟಿ. ರವಿ ಹೇಳಿಕೆಗೆ ತಿರುಗೇಟು ನೀಡಿ, ಅಲ್ಲಿ ಒಂದೂವರೆ ಲಕ್ಷ ಜನ ಸೇರಿದ್ದರು. ಯಾರೋ ಕೂಗಿಬಿಡುತ್ತಾರೆ. ಅದರಿಂದ ಬದಲಾಗುತ್ತಾ? **3ನೇ ಪುಟಕ್ಕೆ**









# ಸಂಪ್ರದಾಯ

## ಧನುರ್ಮಾಸ ವೃತ




ಒಮ್ಮೆ ಸೃಷ್ಟಿಕರ್ತರಾದ ಬ್ರಹ್ಮದೇವರು ಹಂಸಪಕ್ಷಿಯ ಅವತಾರದಲ್ಲಿ ಲೋಕ ಸಂಚಾರ ಮಾಡುತ್ತಿರುವಾಗ ಸೂರ್ಯ ದೇವರು ಬ್ರಹ್ಮದೇವರ ಮೇಲೆ ಒಮ್ಮಿಂದೊಮ್ಮೆಲೆ ಹೆಚ್ಚಿನ ಶಾಖ ಮತ್ತು ಬೆಳಕನ್ನು ಬೀರುತ್ತಾರೆ. ಇದರಿಂದ ಕೋಪಗೊಂಡ ಬ್ರಹ್ಮ ದೇವರು ಸೂರ್ಯ ದೇವರಿಗೆ ನಿನ್ನ ತೇಜಸ್ಸು ಕ್ಷೀಣಿಸಲಿ ಎಂದು ಶಾಪ ನೀಡುತ್ತಾರೆ. ಸೂರ್ಯದೇವರು ಕಾಂತಿ ಹೀನರಾಗಿ ತನ್ನ ಪ್ರಕಾಶ ಕಳೆದುಕೊಂಡಾಗ ಇಡೀ ಭೂಮಂಡಲ ಅಲ್ಲೋಲ ಕಲ್ಲೋಲವಾಗುತ್ತದೆ. ಸೂರ್ಯದೇವರಿಲ್ಲದೆ ಋಷಿ–ಮುನಿಗಳಿಗೆ ನಿತ್ಯ–ಪೂಜೆ ಹಾಗೂ ಹೋಮ–ಹವನಗಳಿಗೆ ಬಹಳ ತೊಂದರೆಯಾಗಿ ಪೂಜೆ ಪುನಸ್ಕಾರಗಳನ್ನು ನಿಲ್ಲಿಸುವಂತಾಯಿತು. ಚಿಂತಿತರಾದ ದೇವಾನುದೇವತೆಗಳು ಹಾಗೂ ಮುನಿವೃಂದದೊಂದಿಗೆ ಬ್ರಹ್ಮದೇವರ ಕುರಿತು ತಪಸ್ಸು ಆಚರಿಸಿದರು. ತಪಸ್ಸಿಗೆ ಬ್ರಹ್ಮದೇವರು ಒಲಿದು ಪ್ರತ್ಯಕ್ಷರಾಗಿ ಇವರ ಸಂಕಷ್ಟಕ್ಕೆ ಪರಿಹಾರವಾಗಿ "ಸೂರ್ಯದೇವ ಧನುರ್ಮಾಸದಲ್ಲಿ ಮೊದಲ ಜಾವದಲ್ಲಿ ಜಗದೊಡೆಯನಾದ ಶ್ರೀ ಮಹಾವಿಷ್ಣುವನ್ನು ಕುರಿತು ಪೂಜಿಸಿದರೆ ಆತನ ಶಾಪ ವಿಮೋಚನೆಯಾಗಲಿದೆ" ಎಂಬ ಅಭಯ ನೀಡುತ್ತಾರೆ. ಅಂತೆಯೇ ಶ್ರೀ ಸೂರ್ಯ ದೇವರು ಧನುರ್ಮಾಸದ ಪೂಜೆಯನ್ನು ಮೊದಲ ಜಾವದಲ್ಲಿ ಸತತವಾಗಿ ಹದಿನಾರು ವರುಷ ಮಾಡಿ ಶ್ರೀ ಮಹಾ ವಿಷ್ಣುವಿನ ಪೂರ್ಣಾನುಗ್ರಹದಿಂದ ಎಂದಿನಂತೆಯೇ ತೇಜಸ್ಸು ಹಾಗೂ ಕಾಂತಿ ಹೊಂದಿ ಜಗತ್ತಿಗೆ ಬೆಳಕು ನೀಡಿದರು ಎಂದು ಪುರಾಣದಿಂದ ತಿಳಿದು ಬರುತ್ತದೆ. ಸೂರ್ಯದೇವರು ವೃಶ್ಚಿಕ ರಾಶಿಯಿಂದ ಧನು ರಾಶಿಗೆ ಪ್ರವೇಶ ಮಾಡಿ ಒಂದು ತಿಂಗಳ ಕಾಲ ಅಲ್ಲಿರುವಾಗ ಈ ಪರ್ವ ಕಾಲವನ್ನು ಧನುರ್ಮಾಸವಾಗಿ ಆಚರಿಸುವಂತದ್ದಾಗಿದೆ. ಧನುರ್ಮಾಸದ ತಿಂಗಳು ಸೂರ್ಯೋದಯದ ಮುಂಚೆ ಪೂಜೆ ಮಾಡಬೇಕು. ಮೊದಲ ಹದಿನೈದು ದಿನ ನೈವೇದ್ಯಕ್ಕೆ ಸಕ್ಕರೆ ಅಥವಾ ಬೆಲ್ಲ–ಅಕ್ಕಿ–ಹೆಸರು ಬೇಳೆ ಬೆರೆಸಿ ನಂತರ ಬೇಯಿಸಿ ಅರ್ಪಿಸಿದರೆ, ಉಳಿದ ಹದಿನೈದು ದಿನ ಖಾರದ ಪೊಂಗಲ್ ತಯಾರಿಸಿ ನೈವೇದ್ಯ ಮಾಡಬೇಕು ಎಂಬ ಪದ್ಧತಿ ಇದೆ. ಭಕ್ತಾದಿಗಳು ತಮ್ಮ ಇಷ್ಟಾರ್ಥ ಸಿದ್ದಿಗಾಗಿ ಮಾಡುತ್ತಾರೆ.

# ಸಂಪಾದಕೀಯ

ಕರಾವಳಿ ತರಂಗಿಣಿ

## ಉದರ ನಿಮಿತ್ತಂ ಬಹುಕೃತ ವೇಷಂ

– ಲಲಿತಶ್ರೀ ಪ್ರೀತಮ್ ರೈ



ಹೌದು ನಮ್ಮ ಹಿರಿಯರು ಇದನ್ನೇ ಎಷ್ಟು ಚೆನ್ನಾಗಿ ಜನ ಸಾಮಾನ್ಯರಿಗೆ ಅರ್ಥ ಆಗುವ ರೀತಿಯಲ್ಲಿ " ಹೊಟ್ಟೆಗಾಗಿ ಗೇಣು ಬಟ್ಟೆಗಾಗಿ" ಅಂತ ಹೇಳಿದ್ದಾರೆ. ಈ ಜಗತ್ತಿನ ಸೃಷ್ಟಿಯ ಎಲ್ಲದರಲ್ಲೂ ಆ ಪರಮಾತ್ಮನ ಹಿಡಿತವಿರುತ್ತದೆ ಎನ್ನುವುದು ನಮ್ಮ ನಂಬಿಕೆ. ಹೊಟ್ಟೆ ತುಂಬಿದಾಗ ಆತ್ಮ ತೃಪ್ತಿಯಾಗುತ್ತದೆ ಎನ್ನುವುದು ಲೋಕರೂಡಿಯ ಮಾತು. "ವೈಶ್ವಾನರ ರೂಪದಲ್ಲಿ ನಾನು ಜೀವಿಗಳ ಜಠರದಲ್ಲಿ ಇದ್ದೇನೆ" ಎಂದು ಶ್ರೀ ಕೃಷ್ಣ 'ಭಗವದ್ಗೀತೆ'ಯಲ್ಲಿ ನುಡಿದಿರುವುದನ್ನು ನಾವು ನೆನೆಯಬಹುದು. ಹೌದು ಹೊಟ್ಟೆ ತುಂಬಿದರೆ ವೇದಾಂತ ತಾನೇ ತಾನಾಗಿ ಹೊರಬರುತ್ತದೆ. ಪುರಂದರ ದಾಸರು "ಎಲ್ಲಾರು ಮಾಡುವುದು ಹೊಟ್ಟೆಗಾಗಿ, ಗೇಣು ಬಟ್ಟೆಗಾಗಿ ತುತ್ತು ಹಿಟ್ಟಿಗಾಗಿ" ಎಂದಿದ್ದಾರೆ. ಆದರೆ ಎಲ್ಲಾರು ಮಾಡುವುದು ಹೊಟ್ಟೆಗಾಗಿ ಎನ್ನುವುದು ಸರಿಯಾದರೂ ತನ್ನ ಮಕ್ಕಳು, ಮೊಮ್ಮಕ್ಕಳು, ಮರಿಮೊಮ್ಮಕ್ಕಳಿಗಾಗಿ ಸೇರಿಸಿ ಇಡುವುದು ಎಷ್ಟು ಸರಿ. ಇದ್ದವರು ಮನೆಯ ಮೇಲೆ ಮನೆ ಕಟ್ಟಿ ಮೆರೆಯುತ್ತಿದ್ದಾರೆ. ಬಡವರು ಈ ಜಗದಲ್ಲಿ ಒಂದೊತ್ತಿನ ತುತ್ತಿಗೂ ಕಷ್ಟ ಬೀಳುತ್ತಿದ್ದಾರೆ. ಎಂತಹ ವಿಪರ್ಯಾಸ ನೋಡಿ. "ಹೊಟ್ಟೆಗಾಗಿ, ಗೇಣು ಬಟ್ಟೆಗಾಗಿ' ಜನ ಏನೇನೋ ಮಾಡುತ್ತಾರೆ. ಎಂತೆಂತಹ ವೇಷವನ್ನು ಮಾಡಿಸುತ್ತದೆ ಈ ಹೊಟ್ಟೆ. ಈ ಬದುಕಿನ ನಾಟಕ ಶಾಲೆಯಲ್ಲಿ ನಾವು ಒಂದಿಲ್ಲೊಂದು ರೀತಿಯ ಪಾತ್ರದಾರಿಗಳು. ಇಂದು ನಮ್ಮ ಮತ್ತು ನಮ್ಮವರ ಹೊಟ್ಟೆ ತುಂಬಿಸಲು ಪ್ರಯತ್ನಿಸುವ ಮನುಷ್ಯ ಹೊಟ್ಟೆ ತುಂಬುತ್ತಿದ್ದಂತೆ ನಾಳೆಯ ಯೋಚನೆ ಶುರು ಮಾಡಿ ಬಿಡುತ್ತಾನೆ. ಹೀಗೆ ನಾಳೆ, ನಾಡಿದ್ದು, ಮಕ್ಕಳು ಮೊಮ್ಮಕ್ಕಳು ಮರಿ ಮೊಮ್ಮಕ್ಕಳವರೆಗೂ ಕರಗದಷ್ಟು ಆಸ್ತಿ ಮಾಡಿ ಕೊನೆಗಾಲದಲ್ಲಿ ತಾನು ಒಂದೊತ್ತು ಅನ್ನ ತಿನ್ನಲೂ ಸಾಧ್ಯವಾಗದೇ ಸಾಯುವವರನ್ನು ನಾವು ನೋಡಿದ್ದೇವೆ. ತಿಂದುಂಡು ಅನುಭವಿಸಬೇಕಾದ ವಯಸ್ಸಿನಲ್ಲಿ ಗಂಟು ಕಟ್ಟುವುದರಲ್ಲೇ ತನ್ನ ಜೀವವನ್ನು ಸವೆದು ಕೊನೆಗೆ ಇನ್ನಾರೋ ಅನುಭವಿಸುವ ಹಾಗಾಗುತ್ತದೆ. ನಾನು ಹೊಟ್ಟೆಯ ಬಗ್ಗೆ ಮಾತಾಡಲು ಒಂದು ಕಾರಣವಿದೆ. ಅಂದೊಂದು ಮಧ್ಯಾಹ್ನ ಮಂಗಳೂರಿನ ಸರ್ಕಲವೊಂದರ ಕಡೆಯಿಂದ ಪಾಸಾಗುವಾಗ ಒಂದು ಹದಿಹರೆಯದ ಹುಡುಗಿ ಕೈಯಲ್ಲಿ ಮಾರುವುದಕ್ಕೆ ಕರ್ಚಿಫ್‌ಗಳನ್ನು ಹಿಡಿದು ರಸ್ತೆಯ ತುಂಬಾ ವಾಹನ ನಿಂತಿದ್ದರೂ, ಪಕ್ಕದಲ್ಲೇ ಇದ್ದ ಡಿವೈಡರ್‌ನಲ್ಲಿ ಬೇಜಾರಿನಿಂದ ಏನನ್ನೋ ಯೋಚಿಸುತ್ತಾ ಕುಳಿತಿದ್ದದ್ದನ್ನು ನೋಡಿದಾಗ ಕರುಳು ಚುರುಕ್ ಎಂದಿತು. ಸುತ್ತಲೂ ಕಣ್ಣಾಡಿಸಿದಾಗ ಒಂದಷ್ಟು ದೂರದಲ್ಲಿ ಅವಳ ಜೊತೆಗಾರರು ಕಾಣಿಸಿದರು. ಒಂದು ದೊಡ್ಡ ಅಲೆಮಾರಿ ಕುಟುಂಬವೇ ಅಲ್ಲಿತ್ತು. ಅವರನ್ನೆಲ್ಲಾ ನೋಡಿದಾಗ ನನಗೆ ಅವಳ ಬಳಿ ಕರ್ಚಿಫ್ ತೆಗೆದುಕೊಂಡು ಮಾತ್ರ ಅವಳಿಗೆ ನಾನು ಸಹಾಯ ಮಾಡಬಲ್ಲೆ ಎನಿಸಿತು. ಈಗ ತಾನೇ ಯೌವನಕ್ಕೆ ಕಾಲಿಡುತ್ತಿರುವ ಹುಡುಗಿ. ಅವಳ ಕಣ್ಣಿನಲ್ಲಿ ಅದೆಷ್ಟು ಕನಸು ಚಿಗುರೊಡೆದಿರಲಾರದು ನೀವೇ ಹೇಳಿ. ಅಂತಹ ಯೌವನಕ್ಕೆ ಕಾಲಿಡುತ್ತಿರುವ ಹುಡುಗಿಯೊಬ್ಬಳು ನಡು ರಸ್ತೆಯಲ್ಲಿ ಇದ್ದರೆ, ಅಂದರೆ ಅದು ವ್ಯಾಪಾರ ಮಾಡುವ ಸಲುವಾಗಿ ಇರಲಿ ಅಥವಾ ಇನ್ನಾವುದೇ ರೀತಿಯಲ್ಲಾಗಲಿ ಅವಳ ಸುತ್ತಲಿರುವ ಹದ್ದುಗಳು ಕುಕ್ಕಿ ತಿನ್ನಲು ಹೊಂಚು ಹಾಕದಿರಬಹುದೇ?. ಅಲ್ಲಿಂದ ಹೊರಟ ನನ್ನ ಮನಸಿನಲ್ಲಿ ಅದೇನು ಮಸುಕು ಮನೆ ಮಾಡಿದಂತಾಗಿತ್ತು. ಈ ದೇವರಿಗೇಕೆ ಕರುಣೆ ಇಲ್ಲ. ಕೆಲವರಿಗೆ ಬೇಡ ಎನ್ನುವಷ್ಟು ಆಸ್ತಿ ಅಂತಸ್ತು. ಇನ್ನು ಕೆಲವರಿಗೆ ಹೊಟ್ಟೆಗೂ ಇಲ್ಲದೆ ಸಾಯುವ ಪರಿಸ್ಥಿತಿ. ಒಂದು ತಕ್ಕಡಿ ಮೇಲೆ ಇನ್ನೊಂದು ತಕ್ಕಡಿ ಕೆಳಗೆ. ಅದನ್ನು ಸರಿ ಸಮಾನಾಗಿ ತೂಗಿದ್ದರೆ ಅದೆಷ್ಟು ಚೆನ್ನಾಗಿತ್ತು ಅನಿಸಿತು. ನಾನಿನ್ನೂ ಚಿಕ್ಕವಳಿದ್ದಾಗ ಅಮ್ಮನ ಬಳಿ ಒಂದು ಸಲ ಕೇಳಿದ್ದೆ "ಅಮ್ಮ ನಮಗೇಕೆ ಯವಾಗಲೂ ಕಷ್ಟ, ಬೇರೆಯವರೇಕೆ ಅಷ್ಟು ಚೆನ್ನಾಗಿದ್ದಾರೆ" ಅಂತ. ಆಗ ದೈವಭಕ್ತೆಯಾದ ನಮ್ಮಮ್ಮ ಒಂದೇ ಮಾತಿನಲ್ಲಿ "ನಮ್ಮ ಪೂರ್ವ ಜನ್ಮದ ಕರ್ಮದ ಫಲವನ್ನು ನಾವು ಅನುಭವಿಸುತ್ತದ್ದೇವೆ" ಎಂದಿದ್ದರು. ಅದು ನಿಜ ಇರಬಹುದೇನೋ ಅನಿಸಿತ್ತು ಆ ಸಮಯಕ್ಕೆ. ಆದರೆ ಅಮ್ಮನ ಮಾತಿನಲ್ಲಿ ಮಗಳು ಕೂಡ ಇನ್ನೊಬ್ಬರಿಗೆ ನೋವು, ತೊಂದರೆ ಕೊಡದೇ ಬದುಕಲಿ ಎನ್ನುವುದು ಇತ್ತು ಎನ್ನಿಸುತ್ತದೆ. ಎಷ್ಟೋ ಸಲ ಇಂತಹ ಜನರು ತಮ್ಮ ಹೊಟ್ಟೆ ಪಾಡಿಗಾಗಿ ಕಷ್ಟ ಬೀಳುವುದನ್ನು ನೋಡಿದಾಗ ಇಂತಹ ಆದುನಿಕ ಯುಗದಲ್ಲೇ ಇಂತಹ ಬಡತನ ಜಗತ್ತನ್ನು ಕಾಡುತ್ತಿದೆ ಎಂದರೆ ಇನ್ನೂ ನಮ್ಮ ಅಜ್ಜ, ಮುತ್ತಜ್ಜರ ಕಾಲದಲ್ಲಿ ಅದೆಂತಹ ಬಡತನದ ಬೇಗೆಯಲ್ಲಿ ಬೆಂದಿರಬಹುದು ಎನಿಸದೇ ಇರುವುದಿಲ್ಲ. ಇನ್ನೂ ಶಾಲೆಗೆ ಸೇರಿ ಆಟ–ಪಾಠ ಕಲಿತು ತನ್ಮೂಲಕ ದೇಶದ ಸತ್ಪಜೆಯಾಗಬೇಕಾದ ಮಕ್ಕಳು ತನ್ನ ತಂದೆ ತಾಯಿಯ ಜೊತೆ ಬಿಸಿಲು, ಗಾಳಿ, ಮಳೆ ಲೆಕ್ಕಿಸದೆ ರಸ್ತೆ ಬದಿಯಲ್ಲಿ ಬದುಕಿನ ಬಂಡಿ ತಳ್ಳಲು ಪಡುತ್ತಿರುವ ಪಾಡನ್ನು ಗಮನಿಸಿದರೆ ಸರ್ಕಾರಗಳು ಜಾರಿಗೆ ತರುವ ಯೋಜನೆಗಳು ಈ ಜನರಿಗೆ ಏಕೆ ತಲುಪಲು ಸಾಧ್ಯವಾಗುತ್ತಿಲ್ಲವೆಂಬುದು ಅರ್ಥವಾಗುತ್ತಿಲ್ಲ. ಪ್ರತಿ ವರ್ಷ ಕೋಟಿಗಟ್ಟಲೆ ಹಣವನ್ನು ಇಂತವರಿಗಾಗಿಯೇ ಸರಕಾರಗಳು ಮೀಸಲಿಡುತ್ತಿದೆ. ಆದರೆ ಈ ಸವಲತ್ತುಗಳು ಯಾವ ಹೊಟ್ಟೆ ಬಾಕರ ಪಾಲಾಗುತ್ತಿದೆಯೋ ಅಂತವರಿಗೆ ಈ ಕರ್ಮದ ಫಲಗಳು ಕಾಡದಿರುವುದೇ? ಎನ್ನುವ ಪ್ರಶ್ನೆಯೂ ಕಾಡುವುದುಂಟು. ಏನೇ ಆಗಲಿ ಈ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಅಲ್ಲೊಮ್ಮೆ ಇಲ್ಲೊಮ್ಮೆ ಇಣುಕುವುದುಂಟು. ಮಾನವೀಯ ಮೌಲ್ಯಗಳನ್ನು ನಮ್ಮ ಮುಂದಿನ ಪೀಳಿಗೆಗೆ ಮುಟ್ಟಿಸುವ ಮೂಲಕ ಅವರಿಗೆ ದಾರಿದೀಪವಾಗೋಣ...

ವೈದ್ಯೋನಾರಾಯಣೋ ಹರಿಃ

# ಹಾಡೇ ಬಳ್ಳಿ




ನಮ್ಮ ದೇಶದ ಕರಾವಳಿಯಲ್ಲಿ ವಿಶೇಷವಾಗಿ ಬೆಳೆಯುವ ಈ ಬಳ್ಳಿಯನ್ನು ಸಂಸ್ಕೃತದಲ್ಲಿ ಪಾಠಾ, ಹಿಂದಿಯಲ್ಲಿ ಪಾಂಡಾ, ಕೊಂಕಣಿಯಲ್ಲಿ ಪಾಡ್ ವೇಲ್ ಹಾಗೆ ತುಳುವಿನಲ್ಲಿ ಪಾದಲಪ್ಪು ಎಂದು ಕರೆಯಲಾಗುತ್ತದೆ. ವರ್ಷವೆಲ್ಲಾ ಬೆಳೆಯುವ ಈ ಬಳ್ಳಿಯಲ್ಲಿ ಪೆಬ್ರವರಿ ಮಾರ್ಚ್ ಹೂ ಕಾಯಿ ಬಿಡುತ್ತದೆ. ಹಣ್ಣು ಬಿಳಿ ಬಣ್ಣದಲ್ಲಿ ದ್ರಾಕ್ಷಿಯಂತೆ ಗೊಂಚಲಾಗಿದ್ದು ರುಚಿಯಲ್ಲಿ ಕಹಿಯಗಿರುತ್ತದೆ. ನಮ್ಮ ಹಿರಿಯರು ಮನೆಮದ್ದಿನಲ್ಲಿ ಈ ಬಳ್ಳಿಯ ಬೇರು, ಎಲೆ, ಕಾಯಿಯನ್ನು ಉಪಯೋಗಿಸುತ್ತಿದ್ದರು. ಚಿಕ್ಕ ಮಕ್ಕಳಿಗೆ ಅಥವಾ ದೊಡ್ಡವರಿಗೆ ಹೊಟ್ಟೆ ನೋವು ಉಂಟಾದಾಗ ನಾವು ಹಾಡೆ ಬೇರು ಅಥವಾ ಗಡ್ಡೆಯನ್ನು ಬಳಸಬಹುದು

ಈ ಹಾಡೇಬಳ್ಳಿಯ ಬೇರು ಕಿತ್ತು ಸ್ವಚ್ಚ ಮಾಡಿ ಹುಳಿಮಜ್ಜಿಗೆಯಲ್ಲಿ ತೇಯ್ದು ದೊಡ್ಡವರಿಗೆ ಎರಡು ಚಮಚ ಸಣ್ಣವರಿಗೆ ಒಂದು ಚಮಚ ಮೂರುದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸುವುದರಿಂದ ಜಂತು ಹುಳದ ಬಾದೆ ಕಡಿಮೆಯಾಗುತ್ತದೆ. .

ಹಾಡೇ ಬಳ್ಳಿಯ ಎಲೆ ತೆಗೆದುಕೊಂಡು ಸ್ವಲ್ಪವೇ ನೀರು ಹಾಕಿ ಕಿವುಚಿ ಎರಡು ಗಂಟೆ ಹಾಗೆ ಇಟ್ಟರೆ ಗಟ್ಟಿಯಾಗುತ್ತದೆ. ಇದನ್ನು ತಲೆಗೆ ರಾತ್ರಿ ಹಾಕಿ ಮೇಲೆ ವೀಳ್ಯದೆಲೆ ಇಟ್ಟು ನಂತರ ಬೆಳಿಗ್ಗೆ ತೆಗೆಯಬೇಕು. ಹೀಗೆ ಮೂರರಿಂದ ನಾಲ್ಕು ದಿನ ಹಾಕಿದರೆ ಉಷ್ಣತೆಯಿಂದ ಬರುವ ಕಣ್ಣು ಉರಿ ಮತ್ತು ತಲೆನೋವು ಕಡಿಮೆಯಾಗುತ್ತದೆ. ವರ್ಷದ ಒಳಗಿನ ಮಕ್ಕಳಿಗೆ ಹೊಟ್ಟೆ ಉಬ್ಬರವಾದಾಗ ಹಾಡೇಬಳ್ಳಿಯನ್ನು ಹೊಟ್ಟೆಯ ಸುತ್ತಲೂ ಕಟ್ಟಿದರೆ ಕೇವಲ ಎರಡು ಗಂಟೆಯೊಳಗೆ ಹೊಟ್ಟೆಯುಬ್ಬರ ಕಡಿಮೆ ಆಗುತ್ತದೆ.

ಹಾಡೇ ಬಳ್ಳಿಯ ಗಡ್ಡೆಯನ್ನು ಮಜ್ಜಿಗೆಯಲ್ಲಿ ಎರಡು ಚಮಚ ಗಂಧ ತೇದು ಮತ್ತೆ ಸ್ವಲ್ಪ ಮಜ್ಜಿಗೆ ಸೇರಿಸಿ ನಾಲ್ಕು ದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸುತ್ತಾ ಬಂದರೆ ಪಿತ್ತ ಶಮನವಾಗುತ್ತದೆ.

ಹತ್ತು ಹದಿನೈದು ಹಾಡೇ ಬಳ್ಳಿಯ ಹಣ್ಣಿನ ಜೊತೆ ನಾಲ್ಕುರಿಂದ ಐದು ಕಾಳುಮೆಣಸು, ಚಿಟಿಕೆ ಜೀರಿಗೆ ತುಪ್ಪ ಹಾಕಿ ಹುರಿದು ಸ್ವಲ್ಪ ಕಾಯಿತುರಿಯೊಂದಿಗೆ ರುಬ್ಬಿ ಸ್ವಲ್ಪ ಮಜ್ಜಿಗೆ ಸೇರಿಸಿ ಅನ್ನಕ್ಕೆ ಕಲಸಿ ಊಟ ಮಾಡಿದರೆ ವಾಯು ಪಿತ್ತದ ತೊಂದರೆ ವಾಸಿ ಆಗುತ್ತದೆ.

# ಕ್ಷೇತ್ರದರ್ಶನ





ದಕ್ಷಿಣಕಾಶಿ ಮಹಾಕೂಟೇಶ್ವರ

ಮಹಾಕೂಟವು ಚಾಲುಕ್ಯರ ಕಾಲದ ಪ್ರಸಿದ್ಧ ಪುಣ್ಯಕ್ಷೇತ್ರ ಬಾಗಲಕೋಟೆಯ ಬಾದಾಮಿ ತಾಲೂಕಿನಲ್ಲಿದೆ. ಬಾದಾಮಿಯಿಂದ ಪೂರ್ವಕ್ಕೆ ಸುಮಾರು 5 ಕಿಲೋ ಮೀಟರ್ ದೂರದಲ್ಲಿರುವ ನಂದಿಕೇಶ್ವರ ಗ್ರಾಮದ ಬಳಿ ಇರುವ ತೀರ್ಥಕ್ಷೇತ್ರವಾಗಿದ್ದು ಚಾಲುಕ್ಯರು ತಮ್ಮ ಆಡಳಿತದ ಆದಿ ಭಾಗದಲ್ಲಿ ನಿರ್ಮಿಸಿದ ದೇವಾಲಯಗಳ ಅವಶೇಷಗಳನ್ನು ಒಳಗೊಂಡಿದೆ. ಮಹಾಕೂಟ ಪುಣ್ಯಕ್ಷೇತ್ರವು ದಕ್ಷಿಣ ಕಾಶಿ ಎಂದು ಪ್ರಖ್ಯಾತಿ ಹೊಂದಿದೆ. ಕೋಟಿ ಲಿಂಗಗಳಾಗಲು ಒಂದೇ ಒಂದು ಲಿಂಗ ಕಡಿಮೆಯಾದ ಕಾರಣ ಈ ಕ್ಷೇತ್ರ ಕಾಶಿಯಾಗುವ ಅವಕಾಶ ಕಳೆದುಕೊಂಡಿತು ಎಂಬ ಈತಿಹ್ಯವನ್ನು ಹೊಂದಿದೆ. ನಾನಾ ಲಿಂಗಗಳ ಕೂಟವಾದ ಇದು ಮಹಾಕೂಟ ಎಂದು ಕರೆಯಲ್ಪಡುತ್ತದೆ. ಇಲ್ಲಿನ ಒಂದು ಕಲ್ಯಾಣಿಯು ವಿಷ್ಣು ಪುಷ್ಕರಣಿ ಎಂದು ಹೆಸರುವಾಸಿಯಾಗಿದೆ. ಈ ಪುಷ್ಕರಣಿಯಲ್ಲಿ ಈಶ್ವರಲಿಂಗವಿದ್ದು ಹೊಂಡದಲ್ಲಿ ಮುಳುಗಿ ದರ್ಶನ ಮಾಡುವುದು ಇನ್ನೊಂದು ವಿಶೇಷ. ಮಹಾಕೂಟೇಶ್ವರ ಮಂದಿರ ದ್ರಾವಿಡ ಶೈಲಿಯಲ್ಲಿದ್ದು, ಮಂದಿರದ ಹೊರಭಿತ್ತಿ, ಶಿವ, ಅರ್ಧನಾರೀಶ್ವರ ಮೊದಲಾದ ಶಿಲ್ಪಗಳಿಂದ ಅಲಂಕೃತವಾಗಿದೆ. ಶಿವ, ಗೌರಿ ಸರಸ್ವತಿ, ವೀರಭದ್ರ, ವೇಣುಗೋಪಾಲ ಮೂರ್ತಿ ಆಕರ್ಷಕವಾಗಿದೆ. ಈ ಮಹಾಕೂಟದಲ್ಲಿರುವ ಕಾಶಿ ತೀರ್ಥ ಹಾಗೂ ವಿಷ್ಣು ಪುಷ್ಕರಣಿ ಎಂಬ ಎರಡು ವಿಶೇಷ ಹೊಂಡಗಳು ಎಂತಹ ಬರಗಾಲದಲ್ಲೂ ಬತ್ತುವದಿಲ್ಲ. ವರ್ಷಪೂರ್ತಿ ಇಲ್ಲಿ ನೀರಿರುತ್ತದೆ. ಪುಷ್ಕರಣಿ ಹೊಂಡದ ಮಧ್ಯದಲ್ಲಿರುವ ಮಂಟಪದಲ್ಲಿ ತುಂಬಾ ವಿಶಿಷ್ಟವಾದ ಚತುಮುರ್ಖ ಲಿಂಗವಿದೆ. ಇದನ್ನು ಅಗಸ್ತ್ಯಮುನಿ ನಿರ್ಮಿಸಿದನೆಂದು ಹೇಳಲಾಗುತ್ತದೆ. ಮಹಾಕೂಟೇಶ್ವರ ಹಾಗೂ ಮಲ್ಲಿಕಾರ್ಜುನ ದೇವರ ದೇವಾಲಯಗಳನ್ನು ಒಂದೇ ಮಾದರಿಯಲ್ಲಿ ನಿರ್ಮಿಸಲಾಗಿದೆ. ಮಹಾಕೂಟೇಶ್ವರ ಮತ್ತು ಮಲ್ಲಿಕಾರ್ಜುನ ದೇವಾಲಯಗಳ ಮಧ್ಯೆ ಒಂದು ಪುಷ್ಕರಣಿ ಮತ್ತು ಅದರ ಸುತ್ತಲೂ ಸಣ್ಣ ಸಣ್ಣ ದೇವಾಲಯಗಳಿವೆ. ಅಗಸ್ತ್ಯೆಶ್ವರ, ವೀರಭದ್ರೇಶ್ವರ ಮೊದಲಾದ ಹಲವಾರು ಚಿಕ್ಕ ಗುಡಿಗಳಿವೆ. ಪ್ರಮುಖ ದೇಗುಲದ ಹೊರಬಿತ್ತಿಯ ಮೇಲೆ ವಿಷ್ಣು, ಸ್ಥಾನಕಬ್ರಹ್ಮ, ಅರ್ಧ ನಾರೀಶ್ವರ, ಪರಶುಧರ ಶಿವ, ತ್ರಿಶೂಲಧಾರಿ ಶಿವ ಮೊದಲಾದ ಕೆತ್ತನೆ ಇದೆ. ಕೆಳ ಪಟ್ಟಿಕೆಗಳಲ್ಲಿ ಸುಂದರ ಶಿಲ್ಪಕಲಾ ಕೆತ್ತನೆ ಇದೆ. ಶಿವಭಕ್ತರಿಗೆ ಇಂದಿಗೂ ಇದೊಂದು ಪುಣ್ಯಸ್ಥಳವಾಗಿದ್ದು 'ದಕ್ಷಿಣಕಾಶಿ' ಎಂದೇ ಪ್ರಸಿದ್ಧವಾಗಿದೆ. ಅನೇಕ ಶಿವಾಲಯಗಳ ಸಮುಚ್ಚಯವಾಗಿರುವುದರಿಂದ ಇದಕ್ಕೆ 'ಮಹಾಕೂಟ' ಎಂದು ಹೆಸರು ಬಂದಿದೆ. ಕ್ರಿಶ 602ರಲ್ಲಿ ಚಾಳುಕ್ಯರ ಮಂಗಳೇಶನು ತನ್ನ ಯುದ್ಧ–ವಿಜಯಗಳ ನೆನಪಿಗಾಗಿ ಇಲ್ಲಿ ಅನೇಕ ಶಿವಲಿಂಗಗಳ ದೇವಾಲಯಗಳನ್ನು ಕಟ್ಟಿಸಿದ್ದಾನೆ. ಮಹಾಕೂಟೇಶ್ವರ ದೇವಾಲಯದ ಮುಂದೆಯೂ ಚಾಳುಕ್ಯರಾಜ ಮಂಗಲೀಶನ ಶಾಸನವುಳ್ಳ ಅಷ್ಟಕೋನದ ಶಿಲಾಸ್ತಂಭವಿತ್ತು. ಇದು ಈಗ ಬಿಜಾಪುರದಲ್ಲಿರುವ ಪುರಾತತ್ವ ವಸ್ತು ಸಂಗ್ರಹಾಲಯದಲ್ಲಿದೆ. ಇಲ್ಲಿರುವ ಹಲವು ಶೈವ ದೇವಾಲಯಗಳಿಂದ ಇದೊಂದು ಪ್ರಸಿದ್ಧ ಶೈವ ಧರ್ಮದ ಕೇಂದ್ರವಾಗಿದ್ದಿರಬೇಕೆಂದು ಊಹಿಸಿದಲಾಗಿದೆ. ಇಂತಹ ಪವತ್ರ ಮತ್ತು ಇತಿಹಾಸ ಪ್ರಸಿದ್ಧ ಕ್ಷೇತ್ರವನ್ನು ಜೀವನದಲ್ಲಿ ಒಂದುಬಾರಿ ಬೇಟಿ ನೀಡಲು ಮರೆಯದಿರಿ.

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ

@ ಕೃಷ್ಣಾಮೃತ



ಹಿಮಾಲಯವು ಭಾರತೀಯ ಉಪಖಂಡವನ್ನು ಟಿಬೆಟ್ ಪ್ರಸ್ಥಭೂಮಿಯಿಂದ ಪ್ರತ್ಯೇಕಿಸುವ ಒಂದು ಬೃಹತ್ ಪರ್ವತ ಶ್ರೇಣಿ. ಎವರೆಸ್ಟ್ ಶಿಖರವನ್ನೂ ಒಳಗೊಂಡಂತೆ ಪ್ರಪಂಚದ ಅತಿ ಎತ್ತರದ ಹಲವಾರು ಪರ್ವತಶಿಖರಗಳು ಇಲ್ಲಿವೆ. ಹಾಗೆಯೇ ಎರಡು ಮುಖ್ಯ ನದಿಗಳ ತವರು ಕೂಡ ಹಿಮಾಲಯ ಶ್ರೇಣಿ. ಸಂಸ್ಕೃತದಲ್ಲಿ "ಹಿಮಾಲಯ" ಎಂದರೆ "ಹಿಮದ ಮನೆ" ಎಂದರ್ಥ. ಸುಮಾರು 4–7 ಕೋಟಿ ವರ್ಷಗಳ ಹಿಂದೆ ಎರಡು ಭೂಭಾಗಗಳು ಒಂದಕ್ಕೊಂದು ಗುದ್ದಿದಾಗ ಹಿಮಾಲಯ ಪರ್ವತಗಳು ಸೃಷ್ಟಿಯಾದವು. ಸುಮಾರು 2–3 ಕೋಟಿ ವರ್ಷಗಳ ಹಿಂದೆ ಇಂದಿನ ಭಾರತದ ಪ್ರದೇಶದಲ್ಲಿದ್ದ ಟೆತಿಸ್ ಸಾಗರ ಸಂಪೂರ್ಣವಾಗಿ ಮುಚ್ಚಿ ಹೋಯಿತು. ಇಂಡೋ–ಆಸ್ಟ್ರೇಲಿಯನ್ ಭೂಭಾಗ ಇಂದಿಗೂ ನಿಧಾನವಾಗಿ ಟಿಬೆಟ್ ಭೂಭಾಗದ ಅಡಿಯಲ್ಲಿ ಚಲಿಸುತ್ತಿದೆ ಎನ್ನಲಾಗುತ್ತದೆ. ಈ ಚಲನೆಯಿಂದ ಹಿಮಾಲಯ ಶ್ರೇಣಿ ವರ್ಷಕ್ಕೆ ಅರ್ಧ ಸೆ.ಮೀನಷ್ಟು ಬೆಳೆಯುತ್ತಿದೆ. ಇದೇ ಚಲನೆಯಿಂದ ಈ ಪ್ರದೇಶ ಸಾಕಷ್ಟು ಭೂಕಂಪಗಳನ್ನು ಸಹ ಕಂಡಿದೆ. ಹಿಮಾಲಯ ಶ್ರೇಣಿ ಪಶ್ಚಿಮದಲ್ಲಿ "ನಂಗಾ ಪರ್ಬತ್" ಇಂದ ಪೂರ್ವದಲ್ಲಿ "ನಾಮ್ಚೆ ಬರ್ವಾ"ದವರೆಗೆ ಸುಮಾರು 2400 ಕಿಮೀ ಉದ್ದವಿದೆ. ಅಗಲ 250–300 ಕಿಮೀ. ಹಿಮಾಲಯ ಟಿ ಶ್ರೇಣಿಯಲ್ಲಿ ಸಮಾನಾಂತರವಾಗಿ ಸಾಗುವ ಮೂರು ವಿಭಿನ್ನ ಶ್ರೇಣಿಗಳನ್ನು ಕಾಣಬಹುದು. ಹಿಮಾಲಯ ಪ್ರದೇಶದಲ್ಲಿ ನೂರಾರು ಸರೋವರಗಳು ಕಂಡುಬರುತ್ತವೆ. ಈ ಸರೋವರಗಳಲ್ಲಿ ಹೆಚ್ಚಿನವು 5,000 ಮೀ. ಗಿಂತ ಕಡಿಮೆ ಎತ್ತರದಲ್ಲಿ ಸಿಗುತ್ತವೆ. ಹಾಗೂ ಈ ಸರೋವರಗಳ ವಿಸ್ತಾರವು ಎತ್ತರದೊಂದಿಗೆ ಕಡಿಮೆಯಾಗುತ್ತದೆ. ಇವುಗಳಲ್ಲಿ ಪ್ಯಾಂಗಾಂಗ್ ತ್ಸೋ ಸರೋವರ ಅತಿ ದೊಡ್ಡದು. ಭಾರತ/ಟಿಬೆಟ್ ಸರಹದ್ದಿನ ಬಳಿಯಿರುವ ಈ ಸರೋವರವು ಸುಮಾರು 8 ಕಿ.ಮೀ. ಅಗಲ ಹಾಗೂ 134 ಕಿ.ಮೀ. ಉದ್ದವಿದ್ದು, 4,600 ಮೀ. ಎತ್ತರದಲ್ಲಿದೆ. ಎತ್ತರದಲ್ಲಿರುವ ಒಂದು ಮುಖ್ಯವಾದ ಸರೋವರ ಗುರುಡೋಗ್ಮಾರ್. ಉತ್ತರ ಸಿಕ್ಕಿಂನಲ್ಲಿರುವ ಗುರುಡೋಗ್ಮಾರ್ 5,148 ಮೀ. (16,890 ಅಡಿ) ಎತ್ತರದಲ್ಲಿದೆ. ಇನ್ನಿತರ ದೊಡ್ಡ ಸರೋವರಗಳಲ್ಲಿ ಭಾರತ/ ಚೀನಾ ಸರಹದ್ದಿನ ಬಳಿ ಸಿಕ್ಕಿಂನಲ್ಲಿರುವ ಛಾಂಗು ಸರೋವರವೂ ಸೇರಿದೆ. ಹಿಮನದಿಗಳ ಚಟುವಟಿಕೆಯಿಂದ ಸೃಷ್ಟಿಯಾದ ಸರೋವರಗಳಿಗೆ ಭೂವಿಜ್ಞಾನಿಗಳು ಟಾರ್ನ್‌ಗಳೆಂದು ಕರೆಯುತ್ತಾರೆ. ಹಿಂದೂ ಪುರಾಣಗಳಲ್ಲಿ ಹಿಮಾಲಯವನ್ನು ಹಿಮವತ ಎಂದರೆ ಪಾರ್ವತಿಯ ತಂದೆ ಎನ್ನಲಾಗಿದೆ. ಇದಲ್ಲದೆ, ಹಿಂದೂ ಮತ್ತು ಬೌದ್ಧ ಧರ್ಮಗಳಲ್ಲಿ ಹಿಮಾಲಯದ ಹಲವಾರು ಸ್ಥಳಗಳಿಗೆ ಪ್ರಾಮುಖ್ಯತೆ ನೀಡಲಾಗಿದೆ. ಅವುಗಳಲ್ಲಿ ಹರಿದ್ವಾರದಲ್ಲಿ ಗಂಗಾ ನದಿಯು ಪರ್ವತಗಳಿಂದಾಚೆಗೆ ಬಂದು ಸಮತಳ ಭೂಮಿಯನ್ನು ಹೊಕ್ಕುತ್ತಾಳೆ. ಬದರೀನಾಥ್‌ನಲ್ಲಿ ವಿಷ್ಣುವಿಗೆ ಮುಡಿಪಾದ ಮಂದಿರವಿದೆ. ಕೇದಾರನಾಥ್‌ದಲ್ಲಿ ಜ್ಯೋತಿರ್ಲಿಂಗವನ್ನು ಕಾಣಬಹುದು. ಗೋಮುಖ್ ಭಾಗೀರಥಿಯ ಉಗಮ ಸ್ಥಳ. ಗಂಗೋತ್ರಿ ನಗರದಿಂದ ಕೆಲವೇ ಮೈಲಿಗಳ ಅಂತರದಲ್ಲಿದೆ. ದೇವಪ್ರಯಾಗದಲ್ಲಿ ಅಲಕನಂದಾ ಮತ್ತು ಭಾಗೀರಥಿ ನದಿಗಳ ಸಂಗಮವಾಗಿ ಗಂಗೆಯಾಗಿ ಮುಂದೆ ಹರಿಯುತ್ತದೆ. ಕೈಲಾಸ ಪರ್ವತವು 6,638 ಮೀ. ಎತ್ತರದ ಶಿಖರ. ಹಿಂದೂ ಧರ್ಮೀಯರು ಇದನ್ನು ಶಿವನ ವಾಸಸ್ಥಾನ ಎಂದು ಪರಿಗಣಿಸುತ್ತಾರೆ. ಈ ಶಿಖರವನ್ನು ಬೌದ್ಧ ಧರ್ಮೀಯರೂ ಪೂಜ್ಯ ಭಾವನೆಯಿಂದ ನೋಡುತ್ತಾರೆ. ಬ್ರಹ್ಮಪುತ್ರ ನದಿಯ ಉಗಮ ತಾಣವಾದ ಈ ಪರ್ವತವು ಮಾನಸ ಸರೋವರವನ್ನು ತನ್ನ ತಪ್ಪಲಿನಲ್ಲಿ ಹೊಂದಿದೆ. ಅಮರನಾಥದಲ್ಲಿ ಹಿಮದಿಂದ ಸ್ವಾಭಾವಿಕವಾಗಿ ಶಿವಲಿಂಗವು ಮೂಡುತ್ತದೆ. ಈ ಲಿಂಗವು ಪ್ರತಿ ವರ್ಷವೂ ಚಳಿಗಾಲದಲ್ಲಿ ಕೆಲವು ವಾರಗಳಲ್ಲಿ ಕಂಡುಬರುತ್ತದೆ. ಈ ಸಮಯದಲ್ಲಿ ಜನರು ಸಾವಿರಾರು ಸಂಖ್ಯೆಯಲ್ಲಿ ಶಿವಲಿಂಗದ ದರ್ಶನ ಪಡೆಯಲು ಆಗಮಿಸುತ್ತಾರೆ. ವೈಷ್ಣವೋ ದೇವಿ ಮಂದಿರವು ಪ್ರಸಿದ್ಧಿಯನ್ನು ಹೊಂದಿದೆ. ದಲೈಲಾಮಾ ಅವರ ನಿವಾಸ ಸೇರಿದಂತೆ ಟಿಬೆಟ್ಟಿನ ಬೌದ್ಧ ಧರ್ಮದ ಹಲವಾರು ಸ್ಥಳಗಳು ಹಿಮಾಲಯದಲ್ಲಿ ಕಾಣಸಿಗುತ್ತವೆ. ಭಾರತೀಯ ಉಪಖಂಡ ಮತ್ತು ಟಿಬೆಟ್ ಪ್ರಸ್ಥಭೂಮಿಗಳ ಹವಾಮಾನದ ಮೇಲೆ ಹಿಮಾಲಯ ಶ್ರೇಣಿ ಆಳವಾದ ಪ್ರಭಾವವನ್ನು ಬೀರುತ್ತದೆ. ಆರ್ಟಿಕ್ ಪ್ರದೇಶದಿಂದ ಚಳಿ ಗಾಳಿ ಭಾರತದೊಳಕ್ಕೆ ಬೀಸುವುದನ್ನು ಹಿಮಾಲಯ ಶ್ರೇಣಿತಡೆಯುತ್ತದೆ. ಇದರಿಂದಾಗಿ ದಕ್ಷಿಣ ಏಷ್ಯಾ– ಟಿಬೆಟ್ ಮೊದಲಾದ ಪ್ರದೇಶಗಳಿಗಿಂತ ಬೆಚ್ಚಗಿರುತ್ತದೆ. ಹಾಗೆಯೇ ಮಾನ್ಸೂನ್ ಮಾರುತಗಳನ್ನು ತಡೆದು ಭಾರತದ ಪೂರ್ವ ರಾಜ್ಯಗಳಲ್ಲಿ (ಮಿಜೋರಂ, ಮೇಘಾಲಯ,ಇತ್ಯಾದಿ) ಬಹಳಷ್ಟು ಮಳೆಯಾಗುವಂತೆ ಮಾಡುತ್ತದೆ. ಮಾನ್ಸೂನ್ ಮಾರುತಗಳು ಹಿಮಾಲಯವನ್ನು ದಾಟಲಾಗದೆ ಇರುವುದೂ ಸಹ ಟಿಬೆಟ್/ಚೀನಾಗಳಲ್ಲಿನ ಗೋಬಿ ಮರುಭೂಮಿ ಮತ್ತು ತಕ್ಲಮಕಾನ್ ಮರುಭೂಮಿಗಳ ಸೃಷ್ಟಿಗೆ ಒಂದು ಕಾರಣ ಎಂದು ಊಹಿಸಲಾಗಿದೆ. ಹಿಮಾಲಯ ಶ್ರೇಣಿಗಳು ಉತ್ತರದಿಂದ ಆರ್ಕಟಿಕ್ ಕಡೆಯಿಂದ ಬೀಸುವ ಚಳಿಗಾಳಿಯನ್ನು ಬಹುಮಟ್ಟಿಗೆ ತಡೆದರೂ, ಬ್ರಹ್ಮಪುತ್ರ ಕಣಿವೆಯಲ್ಲಿ ಈ ಚಳಿಗಾಳಿಯ ಸ್ವಲ್ಪಪಾಲು ನುಸುಳಿ ಬರುತ್ತದೆ. ಇದರಿಂದಾಗಿ ಬಾಂಗ್ಲಾದೇಶದಲ್ಲಿ ಮತ್ತು ಭಾರತದ ಈಶಾನ್ಯ ರಾಜ್ಯಗಳಲ್ಲಿ ಚಳಿಗಾಲದ ಉಷ್ಣತೆ ಸಾಕಷ್ಟು ಮಟ್ಟಿಗೆ ಕೆಳಗಿಳಿಯುತ್ತದೆ. ಈ ಗಾಳಿಯು ಈಶಾನ್ಯ ಮುಂಗಾರನ್ನೂ ಉಂಟು ಮಾಡುತ್ತದೆ

# ಕಲ್ಪವೃಕ್ಷ

@ಪ್ರೀತಂ ರೈ ಇ

## ರೈಫಲ್‌ಮ್ಯಾನ್ ಮೋತಿ ಕುಮಾರ್ ನೇವಾರ್

ನವೆಂಬರ್ 1971 ರ ಸಮಯದಲ್ಲಿ, Rfn ಮೋತಿ ಕುಮಾರ್ ನೇವಾರ್ ಅವರ ಘಟಕ 5/1 GR ಅನ್ನು ಪೂರ್ವ ವಲಯದಲ್ಲಿ ನಿಯೋಜಿಸಲಾಯಿತು. ಪಾಕಿಸ್ತಾನದೊಂದಿಗಿನ ಯುದ್ಧವು ವಾಸ್ತವವಾಗಿ 03 ಡಿಸೆಂಬರ್ 1971 ರಂದು ಪ್ರಾರಂಭವಾದರೂ, ಪಾಕಿಸ್ತಾನಿ ವಾಯುಪಡೆಯು ಭಾರತದ ವಾಯುನೆಲೆಗಳ ಮೇಲೆ ದಾಳಿ ಮಾಡಿದಾಗ, ಗಡಿ ಕದನಗಳು ಅದಕ್ಕಿಂತ ಮುಂಚೆಯೇ ನಡೆಯುತ್ತಿದ್ದವು ಮತ್ತು Rfn ಮೋತಿ ಕುಮಾರ್ ನೇವಾರ್ ಅವರ ಘಟಕವು 29/30 ನವೆಂಬರ್ 1971 ರಂದು ಅಂತಹ ಒಂದು ಕಾರ್ಯಾಚರಣೆಯಲ್ಲಿ ತೊಡಗಿತ್ತು. ಆ ಅವಧಿಯಲ್ಲಿ ಪಾಕಿಸ್ತಾನದೊಂದಿಗಿನ ಯುದ್ಧವು ಸನ್ನಿಹಿತವಾದಾಗ ಕಾರ್ಯಾಚರಣೆಯ ಸ್ಥಳಗಳಿಗೆ ವಿವಿಧ ಘಟಕಗಳನ್ನು ಸ್ಥಳಾಂತರಿಸಲಾಯಿತು. 30 ನವೆಂಬರ್ 1971 ರಂದು, 5/1 GR ಶತ್ರು ಪಡೆಗಳ ದಾಳಿಗೆ ಒಳಗಾಯಿತು. ರೈಫಲ್‌ಮ್ಯಾನ್ ಮೋತಿ ಕುಮಾರ್ ನೇವಾರ್ ಅವರು ದಾಳಿಯ ಜವಾಬ್ದಾರಿಯನ್ನು ಹೊತ್ತ ರೈಫಲ್ ಕಂಪನಿಯ ಲೈಟ್ ಮೆಷಿನ್ ಗನ್ ಡಿಟ್ಯಾಚ್‌ಮೆಂಟ್‌ನಲ್ಲಿ ನಂಬರ್ ಒನ್ ಆಗಿ ಕಾರ್ಯನಿರ್ವಹಿಸುತ್ತಿದ್ದರು. ಇದರ ಪರಿಣಾಮವಾಗಿ ಆ ಸೆಕ್ಟರ್‌ನಲ್ಲಿ ಶತ್ರುಗಳ ಹಿಡಿತದಲ್ಲಿರುವ ಪೋಸ್ಟ್ ಅನ್ನು ವಶಪಡಿಸಿಕೊಳ್ಳಲು ಅವನ ಬೆಟಾಲಿಯನ್‌ಗೆ ಆದೇಶಿಸಲಾಯಿತು. ಇದು ಶತ್ರುಗಳ ಬಲದಲ್ಲಿ ಉತ್ತಮವಾದ ಕೋಟೆಯ ಸ್ಥಾನವಾಗಿತ್ತು. ದಾಳಿಯ ಸಮಯದಲ್ಲಿ, ರೈಫಲ್‌ಮ್ಯಾನ್ ಮೋತಿ ಕುಮಾರ್ ಮತ್ತು ಅವರ ಸಹಚರರು ಪರಿಣಾಮಕಾರಿ ಸಣ್ಣ ಶಸ್ತ್ರಾಸ್ತ್ರಗಳು ಮತ್ತು ಫಿರಂಗಿ ಗುಂಡಿನ ದಾಳಿಗೆ ಒಳಗಾದರು. ರೈಫಲ್‌ಮ್ಯಾನ್ ಮೋತಿ ಕುಮಾರ್ ನೇವಾರ್ ಅವರು ಶೆಲ್ ಸ್ಪ್ಲಿಂಟರ್‌ನಿಂದ




ತೊಡೆಯಲ್ಲಿ ಗಂಭೀರವಾಗಿ ಗಾಯಗೊಂಡರು ಆದರೆ ಅವರು ತಮ್ಮ ಲಘು ಮೆಷಿನ್ ಗನ್ ಅನ್ನು ತಮ್ಮ ಸೊಂಟದ ಆಧಾರದಲ್ಲಿ ಗುಂಡು ಹಾರಿಸುತ್ತಲೇ ಇದ್ದರು ಮತ್ತು ದಾಳಿಯನ್ನು ಮುಂದುವರೆಸಿದರು. ಆಕ್ರಮಣಕಾರಿ ಪಡೆಗಳು ಶತ್ರುಗಳ ರಕ್ಷಣೆಯೊಂದಿಗೆ ಮುಚ್ಚಿದಾಗ, ಬಂಕರ್‌ನಲ್ಲಿದ್ದ ಶತ್ರು ಹೆವಿ ಮೆಷಿನ್ ಗನ್ ಹಿಡಿದುಕೊಂಡರು ಮತ್ತು ಭಾರತೀಯ ಪಡೆಗಳ ಮೇಲೆ ಭಾರೀ ಸಾವುನೋವುಗಳನ್ನು ಉಂಟುಮಾಡಿದರು. ರೈಫಲ್‌ಮ್ಯಾನ್ ಮೋತಿ ಕುಮಾರ್, ಈ ಬಂದೂಕನ್ನು ನಿಶ್ಶಬ್ದಗೊಳಿಸುವುದರ ಮಹತ್ವವನ್ನು ಅರಿತು, ತನ್ನ ಲಘು ಮೆಷಿನ್ ಗನ್ ಅನ್ನು ತ್ಯಜಿಸಿ, ಶತ್ರುಗಳ ಮೆಷಿನ್ ಗನ್ ಪೋಸ್ಟ್‌ನಲ್ಲಿ ಏಕಾಂಗಿಯಾಗಿ ಚಾರ್ಜ್ ಮಾಡಿದರು ಎರಡು ಗ್ರೆನೇಡ್‌ಗಳನ್ನು ಕೈಯಲ್ಲಿ ತೆಗೆದುಕೊಂಡು ದಾಳಿಗೆ ಮುಂದಾದಾಗ, ಅವರು ಮೆಷಿನ್ ಗನ್ ಸ್ಫೋಟದಿಂದ ಗಂಭೀರವಾಗಿ ಗಾಯಗೊಂಡರು. ಆದರೆ ಹಿಂಜರಿಯದೆ, ಅವರು ಮುಂದಕ್ಕೆ ನುಗ್ಗಿದರು ಮತ್ತು ಲೂಪ್ ಹೋಲ್ ಮೂಲಕ ಗ್ರೆನೇಡ್ ಅನ್ನು ಎಸೆಯುವಲ್ಲಿ ಯಶಸ್ವಿಯಾದರು ಮತ್ತು ಬಂದೂಕನ್ನು ಮೌನಗೊಳಿಸಿದರು. ಅವರು ಗಾಯಗೊಂಡರು ಮತ್ತು ಹುತಾತ್ಮರಾದರು. ರೈಫಲ್‌ಮ್ಯಾನ್ ಮೋತಿ ಕುಮಾರ್ ನೇವಾರ್ ಅವರು ನಿರ್ಭೀತ ಮತ್ತು ಬದ್ಧ ಸೈನಿಕರಾಗಿದ್ದರು, ಅವರು ತಮ್ಮ ಕರ್ತವ್ಯದ ಸಾಲಿನಲ್ಲಿ 19 ವರ್ಷ ವಯಸ್ಸಿನಲ್ಲಿ ತಮ್ಮ ಪ್ರಾಣವನ್ನು ಅರ್ಪಿಸಿದರು. ರೈಫಲ್‌ಮ್ಯಾನ್ ಮೋತಿ ಕುಮಾರ್ ನೇವಾರ್ ಅವರಿಗೆ 15 ಆಗಸ್ಟ್ 1972 ರಂದು ಅವರ ಧೈರ್ಯ, ಹೋರಾಟದ ಮನೋಭಾವ, ಕರ್ತವ್ಯ ನಿಷ್ಠೆ ಮತ್ತು ಪರಮ ತ್ಯಾಗಕ್ಕಾಗಿ "ವೀರ ಚಕ್ರ" ಶೌರ್ಯ ಪ್ರಶಸ್ತಿಯನ್ನು ನೀಡಲಾಯಿತು. ರೈಫಲ್‌ಮ್ಯಾನ್ ಮೋತಿ ಕುಮಾರ್ ನೇವಾರ್ ನೇಪಾಳದಿಂದ ಬಂದವರು ಮತ್ತು 18 ಡಿಸೆಂಬರ್ 1952 ರಂದು ಜನಿಸಿದರು. ಅವರು 17 ನೇ ವಯಸ್ಸಿನಲ್ಲಿ ತಮ್ಮ ಆರಂಭಿಕ ಶಾಲಾ ಶಿಕ್ಷಣದ ನಂತರ ಸೈನ್ಯಕ್ಕೆ ಸೇರಿದರು. ಅವರು 1 ಗೂರ್ಖಾ ರೈಫಲ್ಸ್ ರೆಜಿಮೆಂಟ್‌ನ 5/1 GR ಬೆಟಾಲಿಯನ್‌ಗೆ ನೇಮಕಗೊಂಡರು. 1971 ರಲ್ಲಿ ಪಾಕಿಸ್ತಾನದೊಂದಿಗೆ ಗಡಿ ಉದ್ವಿಗ್ನತೆ ಉಂಟಾದಾಗ ಕಾರ್ಯಾಚರಣೆಗಳಲ್ಲಿ ತೊಡಗಿಸಿಕೊಂಡರು.

# ಪಾರಿಜಾತ

ಕರಾವಳಿ ತರಂಗಿಣಿ

ಒಂದು ಮನೆಯಲ್ಲಿ ಹುಟ್ಟಿ ಇನ್ನೊಂದು ಮನೆ ಬೆಳಗುವ ಹೆಣ್ಣು ತ್ಯಾಗಮಯಿಯಾಗಿ ಅಂದಿನಿಂದ ಇಂದಿನವರೆಗೂ ಸಮಾಜದ ಮುಂದಿದ್ದಾಳೆ. ಅಂತಹ ಹೆಣ್ಣು ಮಕ್ಕಳಲ್ಲಿ ಭಾರತದ ಮೊದಲ ಅಶೋಕ ಚಕ್ರ ಪುರಸ್ಕೃತ ಭಾರತೀಯ ಗಗನಸಖಿ ನೀರಜಾ ಭಾನೋಟ್ ಕರಾವಳಿ ತರಂಗಿಣಿಯ ಇಂದಿನ ವಿಶೇಷ ಅತಿಥಿ. ಹರೀಶ್ ಭಾನೋಟ್ ಮತ್ತು ರಮಾ ಭಾನೋಟ್ ದಂಪತಿಗಳ ಇಬ್ಬರು ಗಂಡುಮಕ್ಕಳ ಬಳಿಕ ಮಗಳಾಗಿ ಚಂದೀಘಡದಲ್ಲಿ ಸೆಪ್ಟೆಂಬರ್ 07 1962 ರಂದು ನೀರಜಾ ಭಾನೋಟ್ ಜನಿಸಿದರು. ಹರೀಶ್‌ರವರಿಗೆ ಮುಂಬೈ ನಗರಕ್ಕೆ ವರ್ಗವಾದ ಕಾರಣ ನೀರಜಾ ಮುಂಬೈನ ಸೇಂಟ್ ಝೇವಿಯರ್ಸ್ ಕಾಲೇಜ್ ನಲ್ಲಿ ತಮ್ಮ ಪದವಿ ಮುಗಿಸಿದಾಗ ಅವರ ವಯಸ್ಸು ಕೇವಲ 17 ವರ್ಷ. ಆಗಲೇ ಮುಂಬೈನ ಪ್ರಸಿದ್ಧ ದಿನಪತ್ರಿಕೆಯೊಂದು ನೀರಜಾ ಒಬ್ಬ ಅಪ್ರತಿಮ ಸುಂದರಿಯೆಂದು ವರದಿ ಮಾಡಿತ್ತು. ಹಾಗಾಗಿ ಪದವಿಯ ನಂತರ ಭಾನೋಟ್ ಅನೇಕ ಜಾಹಿರಾತುಗಳಿಗೆ ರೂಪದರ್ಶಿಯಾಗಿ ಕೆಲಸ ಮಾಡಿದರು. 22ನೇ ವಯಸ್ಸಿನಲ್ಲಿ ಹಿರಿಯರಲ್ಲಾ ನೋಡಿ ಮೆಚ್ಚಿದ ಅನುರೂಪವರನೊಂದಿಗೆ ವಿವಾಹವೂ ನಡೆಯಿತು. ಕೇವಲ 5 ತಿಂಗಳು ಪತಿಯೊಡನೆ ಸಂಸಾರ ಮಾಡಿದ ನೀರಜಾ, ಶಾರ್ಜಾದಲ್ಲಿದ್ದು ಅನಂತರ ಮುಂಬೈಗೆ 'ಚಾರ್ಮಿಸ್ ಕ್ರೀಮ್' ಜಾಹಿರಾತಿನ ಒಪ್ಪಂದದ ಕೊನೆಯ ಹಂತದ ಚಿತ್ರೀಕರಣಕ್ಕೆ ಬಂದಾಗ, ಆ ವಾರದ ಕೊನೆಯಲ್ಲೇ ಪತಿಯಿಂದ ಒಂದು ಆಘಾತಕರ ಪತ್ರ ಬಂದಿತ್ತು. ಅದರಲ್ಲಿ, ನಾನು ಬರೆದಿರುವ ನಿಯಮಗಳನ್ನು ಒಪ್ಪುವ ಹಾಗಿದ್ದರೆ ಸೊಲ್ಲೆತ್ತದೆ ಹಿಂದಿರುಗಿ ಬಾ, ಇಲ್ಲದೆ ಹೋದಲ್ಲಿ ವಿವಾಹ ವಿಚ್ಛೇದನಕ್ಕೆ ಅರ್ಜಿ ಹಾಕುತ್ತಿದ್ದೇನೆ, ಲೆಟ್ ಅಸ್ ಸಪರೇಟ್, ಎಂಬ ಒಕ್ಕಣಿಕೆಯೊಂದಿಗೆ ಪತ್ರ ಅಂತ್ಯಗೊಂಡಿತ್ತು.




ಮಾನಸಿಕ ಸಾಂಗತ್ಯ, ಮಧುರ ಭವಿಷ್ಯದ ಭರವಸೆ ನೀಡದ ಮದುವೆಯ ಬಂಧನದಿಂದ ಹೊರ ಬರಲು ನೀರಜಾ ಬಯಸಿ, 'ವಿವಾಹ ವಿಚ್ಛೇದನ'ಕ್ಕೆ ಒಪ್ಪಿಗೆಯ ಸಹಿ ಹಾಕಿದರು. ನಂತರ ಸೆಪ್ಟೆಂಬರ್ 1985ರಲ್ಲಿ ಅಮೆರಿಕದ 'ಪ್ಯಾನ್ ಅಮೆರಿಕನ್ ವಿಮಾನದ ಫ್ಲೈಟ್ ಅಟೆಂಡೆಂಟ್' ಪದವಿಗೆ ಅರ್ಜಿ ಸಲ್ಲಿಸಿದರು. ಸುಮಾರು 10 ಸಾವಿರ ಅಭ್ಯರ್ಥಿಗಳಲ್ಲಿ ಆಯ್ಕೆಯಾದ ಕೊನೆಯ 80 ಜನ ಮಹಿಳೆಯರಲ್ಲಿ "ನೀರಜಾ ಭಾನೋಟ್" ಒಬ್ಬರಾಗಿ ತರಬೇತಿಗೆ ಆಯ್ಕೆಯಾಗಿದ್ದರು. ಅಮೆರಿಕದ ಮಯಾಮಿಯಲ್ಲಿ ಜರುಗಿದ ತರಬೇತಿಯಲ್ಲಿ ಜಯಗಳಿಸಿದ ಅವರನ್ನು ಚೀಫ್ ಫ್ಲೈಟ್ ಪರ್ಸರ್ ಆಗಿ ನೇಮಿಸಿದರು. 'ಟೆರರಿಸಂ ವಿರುದ್ಧದ ಟ್ರೈನಿಂಗ್' ನಲ್ಲೂ ಅವರಿಗೆ ಸಾಕಷ್ಟು ತರಬೇತಿ ನೀಡಲಾಗಿತ್ತು. 'ಮುಂದಾಳತ್ವದ ಗುಣ' ಅವರಿಗೆ ಬಹಳ ಸಹಾಯಕವಾಯಿತು. 12 ಜನ ಮಹಿಳೆಯರು/ ಪುರುಷರನ್ನೊಳಗೊಂಡ ಟೀಮ್‌ನ ಉಸ್ತುವಾರಿಯ ಜವಾಬ್ದಾರಿ ಅವರ ಹೆಗಲ ಮೇಲಿತ್ತು. ಭಯೋತ್ಪಾದಕರ ಕಪಿಮುಷ್ಠಿಯಲ್ಲಿ ಬಂಧಿತವಾಗಿದ್ದ ಪ್ಯಾನ್ ಅಮೆರಿಕನ್ ವಿಮಾನದ ಪರಿಚಾರಿಕೆಯಾಗಿದ್ದ ನೀರಜಾರವರ ಹಣೆಗೆ ಗುಂಡಿಟ್ಟು ನಿಂತಿದ್ದ 4 ಜನ ಭಯೋತ್ಪಾದಕರಿಂದ 300ಕ್ಕೂ ಅಧಿಕ ಮಂದಿ ಪ್ರಯಾಣಿಕರಿಗೆ ಪುನರ್ಜನ್ಮ ಕೊಟ್ಟು ತಮ್ಮ ಜೀವವನ್ನೇ ಆಹುತಿಯಾಗಿ ಅರ್ಪಿಸಿದರು. ನೀರಜಾ ಭಾನೋಟ್, ತಮ್ಮ 24ನೇ ವರ್ಷದ ಹುಟ್ಟುಹಬ್ಬದಂದು ಈ ಶೌರ್ಯದ ಕಾರ್ಯವೆಸಗಿ ಅಮರರಾದರು. ಎಲ್ಲರಿಗಿಂತ ಮೊದಲೇ ಈ ಜಾಲದಿಂದ ತಪ್ಪಿಸಿಕೊಳ್ಳುವ ಸುವರ್ಣಾವಕಾಶವಿದ್ದಾಗ್ಯೂ ನೀರಜಾ ತಮ್ಮ ಜೀವವನ್ನು ಒತ್ತೆಯಾಗಿಟ್ಟು ಎಲ್ಲರಿಗೂ ಮಾದರಿಯಾದ ದಿಟ್ಟ ಮಹಿಳೆಯ ತ್ಯಾಗಕ್ಕೆ ಕರಾವಳಿ ತರಂಗಿಣಿ ಶಿರಬಾಗಿ ನಮಿಸುತ್ತಿದೆ.

## ಸವಾಲಾಗಿ ಸ್ವೀಕರಿಸಿದಾಗ ಯಶಸ್ಸು : ಕೃಷ್ಣ ಪಾಲೆಮಾರ್

ಒಂದನೇ ಪುಟದಿಂದ......
ಗೇರುಬೀಜ ಕಾರ್ಖಾನೆಯೊಂದರಲ್ಲಿ ಕಾರ್ಮಿಕನಾಗಿ ದುಡಿಯುತ್ತಿದ್ದ ತಾನು ಮುಂದೊಂದು ದಿನ ಆ ಇಡೀ ಆಸ್ತಿಯನ್ನೇ ಖರೀದಿಸುವಷ್ಟು ಶಕ್ತನಾಗುತ್ತೇನೆಂಬ ಕನಸು ಕಂಡಿರಲಿಲ್ಲ. ಆದರೆ ದುಡಿಮೆ ಹಾಗೂ ವ್ಯವಹಾರದಲ್ಲಿ ಪ್ರಾಮಾಣಿಕತೆ ಹಾಗೂ ಬದ್ಧತೆಯನ್ನು ಮೈಗೂಡಿಸಿಕೊಂಡ ಕಾರಣ ಅದು ಇಂದು ಸಾಧ್ಯವಾಗಿದೆ ಎಂದವರು ಹೇಳಿದರು. ಸಣ್ಣ ಪುಟ್ಟ ವ್ಯವಹಾರ ನಡೆಸುತ್ತಿದ್ದ ಸಂದರ್ಭರಿಯಲ್ ಎಸ್ಟೇಟ್ ಆರಂಭಿಸಿದಾಗ ಸಿ.ಎಲ್. ಡಿಸೋಜಾ ಎಂಬವರು ಗಾಡ್‌ಫಾದರ್ ಆಗಿ ಬೆಂಬಲ ನೀಡಿದ ಕಾರಣ ವ್ಯವಹಾರದಲ್ಲಿ ಯಶಸ್ಸು ಗಳಿಸಲು ಸಾಧ್ಯವಾಯಿತು ಎಂದು ನೆನಪಿಸಿಕೊಂಡ ಕೃಷ್ಣ ಪಾಲೆಮಾರ್, ಜಿಲ್ಲಾಉಸ್ತುವಾರಿ, ಬಂದರು ಇಲಾಖೆ, ಪರಿಸರ ಇಲಾಖೆಯ ಸಚಿವನಾಗಿಯೂ ಉತ್ತಮವಾಗಿ ಕಾರ್ಯ ನಿರ್ವಹಿಸಿದ ತೃಪ್ತಿಇದೆ. ಸಚಿವನಾಗಿದ್ದ ಅವಧಿಯಲ್ಲಿ ಮೆರಿಟೈಮ್ ಬೋರ್ಡ್ ಸ್ಥಾಪನೆ ಮಾಡಿದತೃಪ್ತಿ, 40 ಮೈಕ್ರೋನ್‌ಗಿಂತ ಕಡಿಮೆ ಪ್ಲಾಸ್ಟಿಕ್ ಬಳಕೆ ನಿಷೇಧ ಮಾಡಿದ ಬಗ್ಗೆ ಹೆಮ್ಮೆಇದೆ ಎಂದರು.

## ಕೂಗಿದರೆ ರಾಜಕಾರಣದಲ್ಲಿ ಬದಲಾವಣೆ ಆಗಿಬಿಡುತ್ತಾ–ಕೆ.ಜೆ.ಜಾರ್ಜ್

ಒಂದನೇ ಪುಟದಿಂದ......
ಸಿದ್ದರಾಮಯ್ಯ ಸಿಎಂ, ಡಿಕೆಶಿ ಡಿಸಿಎಂ ಇದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ಒಂದು ರೀತಿ ನೀತಿ ಇದೆ. ಸಿಎಂ, ಡಿಸಿಎಂ, ಸಚಿವರಾಗಿ ಯಾರನ್ನು ಮಾಡಬೇಕು, ಯಾರನ್ನು ಬದಲಾವಣೆ ಮಾಡಬೇಕು ಅಂತ ತೀರ್ಮಾನಿಸೋದು ಹೈಕಮಾಂಡ್. ಯಾರೋ ನಾಲ್ಕು ಜನಕೂಗಿದ್ರೆ, ಅವರು ಅವರವರ ಅಭಿಮಾನಕ್ಕೆ ಕೂಗು ತ್ತಾರೆ ಎಂದು ಸ್ಪಷ್ಟೀಕರಣ ನೀಡಿದರು. ರಾಜ್ಯದಲ್ಲಿ ಪವರ್ ಶೇರಿಂಗ್ ಇದ್ಯಾ ಎನ್ನುವ ವಿಚಾರಕ್ಕೆ ಉತ್ತರಿಸಿದ ಅವರು, ಅದರ ಬಗ್ಗೆ ನನಗೆ ಗೊತ್ತಿಲ್ಲ, ಹೈಕಮಾಂಡ್ ಕೇಳಿ. ಹೈಕಮಾಂಡ್ ಏನಾದರೂ ಪವರ್ ಶೇರಿಂಗ್ ಬಗ್ಗೆ ಹೇಳಿದ್ಯಾ? ಇದು ಆಗಾಗ ಬರುತ್ತಿರುತ್ತೆ. ಸುರ್ಜೇವಾಲಾ, ವೇಣುಗೋಪಾಲ, ಖರ್ಗೆ ಅವರು ನಿನ್ನೆ ಬಂದಿದ್ದರು. ಅವರನ್ನೇ ಕೇಳಬೇಕು ಎಂದು ಹೇಳಿದರು.

## ಡಾಲಿ ಮಂಗಳೂರಿನವರಾಗಿದ್ರೆ ಅಂಗಡಿ ಧ್ವಂಸ ಮಾಡಲಾಗುತ್ತಿತ್ತು: ರಾಜ್ ಬಿ ಶೆಟ್ಟಿ

ಒಂದನೇ ಪುಟದಿಂದ......
ಆದಾಯದ ಮೂಲವಾಗಿದ್ದ ಗೂಡಂಗಡಿಗಳನ್ನು ತೆರವು ಗೊಳಿಸಿದ್ದರು. ಬೀದಿ ಬದಿ ವ್ಯಾಪರಿಗಳ ವಿರುದ್ಧದ ಈ ದಬ್ಬಾಳಿಕೆಗೆ ವ್ಯಾಪಕ ಆಕ್ರೋಶ ಕೂಡ ವ್ಯಕ್ತವಾಗಿದ್ದವು. ಈಗ ಲಾಲ್ ಬಾಗ್ ಸ್ಟ್ರೀಟ್ ಫುಡ್ ಫೆಸ್ಟ್‌ಗೆ ಬೀದಿ ಬದಿ ಚಹಾ ಮಾರಾಟಗಾರ ಡಾಲಿ ಚಾಯ್ ವಾಲಾ ಅವರನ್ನು ಅತಿಥಿಯಾಗಿ ಆಹ್ವಾನಿಸಿರುವ ಬೆನ್ನಲ್ಲೇಖ್ಯಾತ ನಟ, ನಿರ್ದೇಶಕ ರಾಜ್ ಬಿ ಶೆಟ್ಟಿ ಇನ್ಸ್ಟಾಗ್ರಾಂನಲ್ಲಿ ಮಾಡಿರುವ ಪೋಸ್ಟ್ ವೊಂದು ಬೀದಿ ಬದಿ ವ್ಯಾಪಾರಿಗಳ ಮೇಲೆ ನಡೆಸಿದ ದಬ್ಬಾಳಿಕೆಯನ್ನು ಮತ್ತೆ ಮುನ್ನೆಲೆಗೆ ತಂದಿದೆ. ನಿರ್ದೇಶಕರಾಜ್ ಬಿ ಶೆಟ್ಟಿ ಇನ್ಸ್ಟಾಗ್ರಾಂನಲ್ಲಿ ಪೋಸ್ಟ್ ಹಾಕಿದ್ದು, 'ಬೀದಿಬದಿ ಚಹಾಮಾರಾಟಗಾರ ಡಾಲಿಚಾಯ್ ವಾಲಾ ಅವರನ್ನು ಮಂಗಳೂರಿಗೆ ಕರೆಸಿ ಸಂಭ್ರಮಿಸಲಾಯಿತು. ಇದೇ ನಗರದಲ್ಲಿ ಕೆಲ ತಿಂಗಳ ಹಿಂದೆ ಬುಲ್ಡೋಝರ್ ಕಾರ್ಯಾಚರಣೆಯ ಮೂಲಕ ಬೀದಿ ಬದಿ ವ್ಯಾಪಾರಸ್ಥರನ್ನು ಒಕ್ಕಲೆಬ್ಬಿಸಲಾಯಿತು. ಡಾಲಿ ಮಂಗಳೂರಿನವನಲ್ಲ ಎಂಬುವುದು ಸಂತೋಷದ ವಿಷಯ. ಒಂದು ವೇಳೆ ಅವರು ಮಂಗಳೂರಿನವರಾಗಿದ್ದರೆ ಅವರ ಅಂಗಡಿಗಳನ್ನು ಧ್ವಂಸಮಾಡಲಾಗುತ್ತಿತ್ತು' ಎಂದು ಬರೆದಿದ್ದಾರೆ.

## ಕೌಶಲ್ಯ ತರಬೇತಿಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪರಿಶಿಷ್ಟ ಜಾತಿ ಉಪ ಯೋಜನೆಯಡಿಯಲ್ಲಿ ಪ.ಜಾ. ಯುವಜನರ ಸ್ವಾವಲಂಬನೆಗೆ ಉತ್ತೇಜಿಸುವ ತರಬೇತಿಗಾಗಿ ಆಸಕ್ತರಿಂದ ಅರ್ಜಿ ಆಹ್ವಾನಿಸಿದೆ. ಅರ್ಜಿಯನ್ನು ಜ.24ರೊಳಗಾಗಿ ಸಲ್ಲಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಈ ತರಬೇತಿಯಲ್ಲಿ ಹಾಜರಾಗುವ ಅಭ್ಯರ್ಥಿಗಳಿಗೆ ಲಘು ಉಪಹಾರ ಹಾಗೂ ಹೊರ ಜಿಲ್ಲೆಗಳಿಂದ ಭಾಗವಹಿಸುವ ಶಿಭಿರಾರ್ಥಿಗಳಿಗೆ ಸಾಮಾನ್ಯ ವಸತಿ ವ್ಯವಸ್ಥೆಯನ್ನು ನೀಡಲಾಗುವುದು.

## ಕಮ್ಯುನಿಟಿ ಹೆಲ್ತ್ ಆಫೀಸರ್ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ–ರಾಷ್ಟ್ರೀಯ ಆಯುಷ್ ಅಭಿಯಾನದ ಯೋಜನೆಯಡಿ ಕೊಡಗು ಜಿಲ್ಲಾ ಆಯುಷ್ ಇಲಾಖೆಯಲ್ಲಿ ಆಯುಷ್ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಿಗೆ ಕಮ್ಯುನಿಟಿ ಹೆಲ್ತ್ ಆಫೀಸರ್ (ಸಿಎಚ್‌ಒ) ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಈ ಕಚೇರಿಯಿಂದ ಪಡೆದು ಸಲ್ಲಿಸಬೇಕಾದ ವಿಳಾಸ, ಜಿಲ್ಲಾ ಆಯುಷ್ ಅಧಿಕಾರಿಗಳು, ಜಿಲ್ಲಾ ಆಯುಷ್ ಕಚೇರಿ, ಮಹದೇವಪೇಟೆ, ಮಡಿಕೇರಿ–571201, ಕೊಡಗು ಜಿಲ್ಲೆ ಇಲ್ಲಿಗೆ ಸಲ್ಲಿಸಬೇಕು ಎಂದು ಸದಸ್ಯ ಕಾರ್ಯದರ್ಶಿ ಹಾಗೂ ಕೊಡಗು ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ರೇಣುಕಾದೇವಿ ಅವರು ತಿಳಿಸಿದ್ದಾರೆ.

## 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಡಿಕೇರಿ – ಕೊಡಗು ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಏಕಲವ್ಯ ಮಾದರಿ, ಅಟಲ್ ಬಿಹಾರಿ ವಾಜಪೇಯಿ, ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳಲ್ಲಿ 2025–26ನೇ ಸಾಲಿಗೆ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. 'ರೀಕ್ಷೆಗೆ ಹಾಜರಾಗುವ ಅಭ್ಯರ್ಥಿಯು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಹಾಗೂ www.kreis.kar.nic.in ಅಲ್ಲಿ ಅರ್ಜಿ ಸಲ್ಲಿಸಬಹುದು.

## ಹಾಲು ಕರೆಯುವ ಸ್ಪರ್ಧೆ : ಅರ್ಜಿ ಆಹ್ವಾನ

ಮಂಗಳೂರು – 2024–25ನೇ ಸಾಲಿನಲ್ಲಿ ಮಂಗಳೂರು ತಾಲೂಕಿನ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಹಾಗೂ ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದ ಜಂಟಿ ಆಶ್ರಯದಲ್ಲಿ ನಡೆಯುವ ಜಾನುವಾರುಗಳಲ್ಲಿ ಹಾಲು ಕರೆಯುವ ಸ್ಪರ್ಧೆಗೆ ಅರ್ಜಿ ಆಹ್ವಾನಿಸಲಾಗಿದೆ. ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಡಾ.ವೆಂಕಟೇಶ್ ಎಸ್.ಎಂ ದೂ.ಸಂ: 9632550628, ಡಾ. ಅಶೋಕ್ ಕೆ.ಆರ್ ದೂ.ಸಂ 9243306956, ಡಾ. ರೇಖಾ ಎಂ.ಟಿ ದೂ.ಸಂ 9243306957 ಸಂಪರ್ಕಿಸಬಹುದು ಎಂದು ಮಂಗಳೂರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಮುಖ್ಯ ಪಶುವೈದ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದುಳಿದ ವರ್ಗಗಳ ವಿದೇಶಿ ವ್ಯಾಸಂಗ ವೇತನ: ಅವಧಿ ವಿಸ್ತರಣೆ

ಮಂಗಳೂರು – 2024–25ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿ.ಹೆಚ್.ಡಿ ಮಾಡುವ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ನೀಡುವ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಸಲು ಫೆಬ್ರವರಿ 05 ವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಇಲಾಖಾ ವೆಬ್ ಸೈಟ್ https://bcwd.karnataka.gov.in/ ಅನ್ನು ಮತ್ತು ಸಹಾಯವಾಣಿ ಸಂಖ್ಯೆ : 8050770004 ಸಂಪರ್ಕಿಸಿ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಗೆ ಅರ್ಜಿ ಆಹ್ವಾನ

ಮಂಗಳೂರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಶ್ರವಣದೋಷವುಳ್ಳ ವ್ಯಕ್ತಿಗಳ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆಯಂತ್ರ ನೀಡುವ ಯೋಜನೆ ಹಾಗೂ ಅಂಧ ವಿಕಲಚೇತನ ವಿದ್ಯಾರ್ಥಿಗಳಿಗೆ ಬ್ರೈಲ್ ಕಿಟ್ ನೀಡುವ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ವಿಕಲಚೇತನರ ದೂ.ಸಂ: 0824–2458173, ಮೊ:9110897458, ಬಂಟ್ವಾಳ ಮೊ:9164645616, ಮೊ: 9686682251, ಮೊ:7975199473, ಮೊ:8105300057 ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದೇಶಿ ವ್ಯಾಸಂಗ ವೇತನ : ಅರ್ಜಿ ಅವಧಿ ವಿಸ್ತರಣೆ

ಶಿವಮೊಗ್ಗ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನೀಡುವ 2024–25ನೇ ಸಾಲಿನ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನದ ಅರ್ಜಿ ಅವಧಿಯನ್ನು ಫೆ.05 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ https://bcwd.karnataka.gov.in/ ಅನ್ನು ನೋಡಬಹುದು ಹಾಗೂ ಸಹಾಯವಾಣಿ ಸಂಖ್ಯೆ: 8050770004ನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಶಾಸಕ ಕಾಮತ್‌ರಿಂದ ಹಿಂದೂ ಟೂರಿಸಂ ಸಮಾವೇಶದ ಆಮಂತ್ರಣ ಬಿಡುಗಡೆ



ದ.ಕ. ಜಿಲ್ಲಾ ಹಿಂದೂ ಟೂರಿಸಂ ಅಸೋಸಿಯೇಶನ್ (ರಿ.) ಇದರ ಸರ್ವ ಸದಸ್ಯರ ಸಮಾವೇಶ ಸಹಿತ ಸಭಾ ಕಾರ್ಯಕ್ರಮವು ಇದೇ ಫೆ. 20ರಂದು ಮಂಗಳೂರು ಕುದ್ಮುಲ್ ರಂಗರಾವ್ ಪುರಭವನದಲ್ಲಿ ಜರಗಲಿದ್ದು ಅದರ ಆಮಂತ್ರಣ ಪತ್ರಿಕೆಯನ್ನು ಶಾಸಕ ವೇದವ್ಯಾಸ ಕಾಮತ್ ರವರು ಬಿಡುಗಡೆಗೊಳಿಸಿದರು. ನಂತರ ಮಾತನಾಡಿದ ಶಾಸಕರು, 2018ರಲ್ಲಿ ವಾಟ್ಸ್ ಆಪ್ ಗ್ರೂಪ್ ಮೂಲಕ ಕೆಲವೇ ಸದಸ್ಯರನ್ನೊಳಗೊಂಡು ಆರಂಭವಾದ ಈ ಸಂಘಟನೆ ಆನಂತರ ಸಂಘದ ಸದಸ್ಯರ ಸಮಸ್ಯೆಗಳಿಗೆ ಸ್ಪಂದಿಸುವುದು, ಅನಾರೋಗ್ಯ/ಅಪಘಾತಗಳ ಸಂದರ್ಭದಲ್ಲಿ ಹಣಕಾಸಿನ ನೆರವು ಸಹಿತ ರಕ್ತದಾನ ಮೊದಲಾದ ಚಟುವಟಿಕೆಗಳನ್ನು ನಡೆಸುತ್ತಾ ಬಂದು ಇದೀಗ ಒಂದು ಸಾವಿರಕ್ಕೂ ಮಿಕ್ಕಿ ಸದಸ್ಯರನ್ನು ಹೊಂದಿರುವುದು ವಿಶೇಷ. ಲಾಕ್ ಡೌನ್ ಸಂದರ್ಭದಲ್ಲಿ ಈ ತಂಡ ನಿರ್ವಹಿಸಿದ ಕಾರ್ಯವಂತೂ ಶ್ಲಾಘನೀಯವಾದುದು. ಮುಂದಿನ ದಿನಗಳಲ್ಲಿ ಈ ಸಂಘಟನೆಯಿಂದ ಹೆಚ್ಚು ಹೆಚ್ಚು ಸಮಾಜಮುಖಿ ಕಾರ್ಯಗಳಾಗಲಿ ಎಂದು ಆಶಿಸಿ ಕಾರ್ಯಕ್ರಮಕ್ಕೆ ಶುಭ ಕೋರಿದರು.

## ರಾಷ್ಟ್ರೀಯ ಬೀದಿ ವ್ಯಾಪಾರ ದಿನ : ಹಕ್ಕೊತ್ತಾಯ ಸಭೆ




ಮಂಗಳೂರು: ದೇಶದ ಬೀದಿ ವ್ಯಾಪಾರಿಗಳ ಐಕ್ಯತೆಯ ಹೋರಾಟದಿಂದ ಬೀದಿ ವ್ಯಾಪಾರಿಗಳ ಜೀವನೋಪಾಯ ಸಂರಕ್ಷಣೆ ಮತ್ತು ನಿಯಂತ್ರಣ ಕಾನೂನು ಜಾರಿಗೆ ಬಂದಿದೆ. ಆದರೆ ಸ್ಥಳೀಯಾಡಳಿತಗಳು ಅನುಷ್ಠಾನ ಮಾಡದೆ ಬೀದಿ ವ್ಯಾಪಾರಿಗಳಿಗೆ ಅನ್ಯಾಯ ಮಾಡುತ್ತಿದೆ ಎಂದು ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನಿಲ್ ಕುಮಾರ್ ಬಜಾಲ್ ಹೇಳಿದರು. ರಾಷ್ಟ್ರೀಯ ಬೀದಿ ವ್ಯಾಪಾರಿಗಳ ದಿನಾಚರಣೆಯ ಅಂಗವಾಗಿ ನಗರದ ಪುರಭವನದ ಬಳಿ ನಡೆದ ಬೀದಿ ವ್ಯಾಪಾರಿಗಳ ಹಕ್ಕೊತ್ತಾಯ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಕೆಂಬಾವುಟ ಮಾತ್ರ ಮಂಗಳೂರಿನ ಬೀದಿ ವ್ಯಾಪಾರಿಗಳಿಗೆ ರಕ್ಷಣೆ ನೀಡಿದ್ದು ಹೋರಾಟ ಮತ್ತು ಸಂಘಟನೆಯಿಂದ ಮಾತ್ರ ನಮ್ಮ ಹಕ್ಕುಗಳ ರಕ್ಷಣೆ ಮಾಡಲು ಸಾಧ್ಯ ಎಂದರು.

## ಮಲೆನಾಡು ಜನ ಹಿತರಕ್ಷಣಾ ವೇದಿಕೆಯಿಂದ ಪ್ರತಿಭಟನೆ



ಉಪ್ಪಿನಂಗಡಿ: ಕಸ್ತೂರಿ ರಂಗನ್ ವರದಿಯನ್ನು ಕೇಂದ್ರ ಮತ್ತು ರಾಜ್ಯ ಸರಕಾರಗಳು ಸಂಪೂರ್ಣ ಕೈಬಿಡಬೇಕು. ಕರ್ನಾಟಕ ರಾಜ್ಯದ ಪಶ್ಚಿಮ ಘಟ್ಟಕ್ಕೂ, ಜನವಸತಿ ಪ್ರದೇಶಕ್ಕೂ, ಕೃಷಿ ಭೂಮಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆಗಳು ಜಂಟಿ ಸರ್ವೇ ನಡೆಸಿ ಗಡಿ ಗುರುತು ಮಾಡಬೇಕೆಂದು ಆಗ್ರಹಿಸಿ ಮಲೆನಾಡು ಜನ ಹಿತರಕ್ಷಣಾ ವೇದಿಕೆಯ ವತಿಯಿಂದ ಉಪ್ಪಿನಂಗಡಿಯಲ್ಲಿ ಪ್ರತಿಭಟನೆ ನಡೆಸಲಾಯಿತು. ಕಿಶೋರ್ ಶಿರಾಡಿ ಮಾತನಾಡಿ ಕಸ್ತೂರಿ ರಂಗನ್ ವರದಿ ಜಾರಿಗೆ ಮುಂದಾಗುವ ಮೂಲಕ ಅರಣ್ಯ ಇಲಾಖೆಯು ರೈತರ ಬದುಕುವ ಹಕ್ಕನ್ನು ಕಸಿಯುವ ಪ್ರಯತ್ನ ಮಾಡುತ್ತಿದೆ. ಕೊರೋನಾ ಕಾಲಘಟ್ಟದಲ್ಲೂ ಕಂಗೆಡದ ರೈತ ಈಗ ಅರಣ್ಯಾಧಿಕಾರಿಗಳು ನೀಡುವ ಉಪಟಳದಿಂದ ತಮ್ಮ ಸ್ವಾವಲಂಬಿ ಬದುಕನ್ನು ಕಳೆದುಕೊಂಡು ಧೃತಿಗೆಡುವಂತಾಗಿದೆ ಎಂದರು.

## ಕೋಮು ಸೌಹಾರ್ದಕ್ಕಾಗಿ ರಾಜ್ಯಾದ್ಯಂತ ಸಮಾವೇಶ



ಮಂಗಳೂರು: ಸಮಾಜದಲ್ಲಿ ಕೋಮು ಸೌಹಾರ್ದಕ್ಕಾಗಿ ಫೆಬ್ರವರಿಯಲ್ಲಿ ರಾಜ್ಯವ್ಯಾಪಿ ಸಮಾವೇಶ ಹಮ್ಮಿಕೊಳ್ಳಲಾಗು ವುದು ಎಂದು ಕರ್ನಾಟಕ ಅಲ್ಪಸಂಖ್ಯಾತ ಆಯೋಗ ಅಧ್ಯಕ್ಷ ನಿಸಾರ್ ಅಹ್ಮದ್ ತಿಳಿಸಿದ್ದಾರೆ. ಮುಂದಿನ ಬಜೆಟ್‌ನಲ್ಲಿ ಅಲ್ಪಸಂಖ್ಯಾತರಿಗೆ ಸರಕಾರ ಕೈಗೊಳ್ಳಬಹುದಾದ ಸವಲತ್ತುಗಳ ಕುರಿತು ದ.ಕ. ಮತ್ತು ಉಡುಪಿ ಜಿಲ್ಲೆಯ ಅಲ್ಪಸಂಖ್ಯಾತ ಮುಖಂಡರೊಂದಿಗೆ ದ.ಕ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆಸಿ ಅವರು ಮಾತನಾಡಿದರು. ಸಮಾಜದಲ್ಲಿ ಕೋಮು ಸಾಮರಸ್ಯ ಅಗತ್ಯವಾಗಿದೆ. ಅದಕ್ಕಾಗಿ ಎಲ್ಲ ಸಮುದಾಯದ ಮುಖಂಡರನ್ನು ಕರೆಸಿ ಚಿಂತನೆ ನಡೆಸಲಾಗುತ್ತಿದೆ. ಮುಂದಿನ ಕ್ರಿಯಾಯೋಜನೆಯಲ್ಲಿ ಗ್ರಾಮಮಟ್ಟದಿಂದ ರಾಜ್ಯಮಟ್ಟದವರೆಗೆ ಪ್ರತ್ಯೇಕ ಕಾರ್ಯಕ್ರಮ ನಡೆಸುವ ಅಗತ್ಯತೆ ಇದೆ. ಎಲ್ಲಾ ಸಮುದಾಯದ ಜನರೂ ಮುಖ್ಯವಾಹಿನಿಯಲ್ಲಿ ಸೇರಬೇಕು ಎಂಬುದು ಆಯೋಗದ ಉದ್ದೇಶವಾಗಿದೆ ಎಂದರು.

## ನಮ್ಮ ಸರ್ಕಾರದಿಂದ ಉನ್ನತ ಪ್ರೋತ್ಸಾಹ: ಸಿ.ಎಂ



ಮಂಗಳೂರು: ಕ್ರೀಡಾಪಟುಗಳು, ಕೋಚ್‌ಗಳು ಮತ್ತು ಕ್ರೀಡಾ ಇಲಾಖೆ ಎಷ್ಟಾದರೂ ಹಣ–ಸವಲತ್ತು ಕೇಳಿ. ನಾನು ಕೊಡ್ತೀನಿ. ಆದರೆ ಒಲಂಪಿಕ್ ನಲ್ಲಿ ರಾಜ್ಯದ ಪಟುಗಳು ದೇಶಕ್ಕಾಗಿ ಮೆಡಲ್ ತನ್ನಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಯುವಜನ ಮತ್ತು ಕ್ರೀಡಾ ಇಲಾಖೆ ಮತ್ತು ಜಿಲ್ಲಾಡಳಿತ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ "ಕರ್ನಾಟಕ ಕ್ರೀಡಾಕೂಟ 2025ನ್ನು ಉದ್ಘಾಟಿಸಿ ಮಾತನಾಡಿದರು. ಅಗತ್ಯ ವೇದಿಕೆ ಮತ್ತು ಉತ್ತಮ ಪ್ರೋತ್ಸಾಹ ಇಲ್ಲದಿದ್ದರೆ ಕ್ರೀಡಾ ಕ್ಷೇತ್ರ ಮತ್ತು ಕ್ರೀಡಾಪಟುಗಳು ಬೆಳವಣಿಗೆ ಆಗಲು ಸಾಧ್ಯವಿಲ್ಲ. ಆದ್ದರಿಂದ ನಮ್ಮ ಸರ್ಕಾರ ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಹಾಜರಾತಿ ಸೇರಿ ಇನ್ನಿತರೆ ರಿಯಾಯ್ತಿಗಳನ್ನು ಕೊಡುವ ಬಗ್ಗೆ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ಪುನರುಚ್ಚರಿಸಿದರು.

## ಯಶ್ಪಾಲ್ ಸುವರ್ಣರ ಸೇಡಿನ ರಾಜಕೀಯ ಉಡುಪಿಗೆ ಶೋಭೆಯಲ್ಲ



ಉಡುಪಿ : "ಉಡುಪಿ ಶಾಸಕ ಯಶ್ಪಾಲ್ ಸುವರ್ಣ ಅವರ ಸೇಡಿನ ರಾಜಕೀಯ ಉಡುಪಿಗೆ ಶೋಭೆ ತರುವುದಿಲ್ಲ. ಕಾಂಗ್ರೆಸ್ ಶಾಸಕರಾಗಿದ್ದ ಯು.ಆರ್.ಸಭಾಪತಿ, ಪ್ರಮೋದ್ ಮಧ್ವರಾಜ್ ಅವರನ್ನು ರಾಜಕೀಯವಾಗಿ ಎದುರಿಸಿಕೊಂಡು ಬಂದಿದ್ದೇನೆ. ನಾವೆಲ್ಲ ರಾಜಕೀಯವಾಗಿ ಜಗಳ ಮಾಡುತ್ತಿದ್ದೆವು. ಆದರೆ ನಾವು ಯಾರೂ ವೈಯಕ್ತಿಕವಾಗಿ ನಿಂದನೆ ಹಾಗೂ ವ್ಯವಹಾರಕ್ಕೆ ತೊಂದರೆ ಮಾಡುತ್ತಿರಲಿಲ್ಲ" ಎಂದು ಮಾಜಿ ಶಾಸಕ ರಘುಪತಿ ಭಟ್ ಹೇಳಿದ್ದಾರೆ. "ಇವತ್ತು ನಾನು ಬಿಜೆಪಿ ತೊರೆದು ಪಕ್ಷೇತರನಾಗಿ ಸ್ಪರ್ಧಿಸಲು ಯಶ್ಪಾಲ್ ಅವರೇ ಕಾರಣ. ಇವರಿಂದ ನನಗೆ ಮಾನಸಿಕ ಆಘಾತ ಆಗಿರುವುದಲ್ಲದೆ, ಮನಸ್ಸಿಗೆ ತುಂಬಾ ಬೇಸರ ಆಗಿದೆ. ಬಿಜೆಪಿಯ ಬೆಳವಣಿಗೆಯಲ್ಲಿ ನನ್ನ ಪಾತ್ರ ಕೂಡ ಇದೆ. ಮೂರು ಬಾರಿ ಶಾಸಕನಾಗಿದ್ದ ನನ್ನನ್ನು ಅವರು ಯಾವ ರೀತಿ ನೋಡಿಕೊಳ್ಳುತ್ತಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿದೆ" ಎಂದು ಹೇಳಿದರು.

## ಉಚ್ಚಿಲ ನಾಗರಿಕರಿಂದ ಹೆದ್ದಾರಿ ತಡೆ



ಪಡುಬಿದ್ರೆ: ರಾಷ್ಟ್ರೀಯ ಹೆದ್ದಾರಿ 66ರ ಅವೈಜ್ಞಾನಿಕ ಕಾಮಗಾರಿಯಿಂದ ಉಚ್ಚಿಲ ಪೇಟೆಯಲ್ಲಿ ನಿರಂತರ ಅಪಘಾತಗಳು ನಡೆಯುತ್ತಿವೆ ಎಂದು ಆರೋಪಿಸಿ ಉಚ್ಚಿಲ ನಾಗರಿಕ ಹೋರಾಟ ಸಮಿತಿಯ ನೇತೃತ್ವದಲ್ಲಿ ಉಚ್ಚಿಲದಲ್ಲಿ ರಾಷ್ಟ್ರೀಯ ಹೆದ್ದಾರಿ 66 ತಡೆ ನಡೆಸಲಾಯಿತು. ಉಚ್ಚಿಲ ಪೇಟೆಯಲ್ಲಿ ಪ್ರತಿಭಟನಾ ಸಭೆ ನಡೆಸಿದ ಪ್ರತಿಭಟನಾಕಾರರು ರಾ. ಹೆದ್ದಾರಿ ಪ್ರಾಧಿಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಮಾಜಿ ಸಚಿವ ವಿನಯಕುಮಾರ್ ಸೊರಕೆ, ಉಚ್ಚಿಲ ನಾಗರಿಕ ಹೋರಾಟ ಸಮಿತಿಯ ಅಧ್ಯಕ್ಷ ಸಿರಾಜ್ ಉಚ್ಚಿಲ ಸಹಿತ ನೂರಾರು ಮಂದಿ ಹೆದ್ದಾರಿ ತಡೆ ನಡೆಸಿ, ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಬೇಕು ಎಂದು ಪಟ್ಟುಹಿಡಿದರು. ಇದೇ ಮಾರ್ಗವಾಗಿ ಸಂಚರಿಸುತ್ತಿದ್ದ ಉಡುಪಿ ಚಿಕ್ಕಮಂಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ, ಉಡುಪಿ ಶಾಸಕ ಯಶ್ಪಾಲ್ ಸುವರ್ಣ ಅವರಲ್ಲಿ ಮನವಿ ಸಲ್ಲಿಸಲಾಯಿತು.

## ಮಂಗಳೂರು ಪ್ರೆಸ್ ಕ್ಲಬ್ ಗೌರವ ಸನ್ಮಾನ



ಮಂಗಳೂರು: ಮಂಗಳೂರು ಪ್ರೆಸ್ ಕ್ಲಬ್ ನ 2024ನೇ ಸಾಲಿನ ಮಂಗಳೂರು ಪ್ರೆಸ್ ಕ್ಲಬ್ ಗೌರವ ಸನ್ಮಾನಕ್ಕೆ ಐವರು ಹಿರಿಯ ಪತ್ರಕರ್ತರು ಆಯ್ಕೆಯಾಗಿದ್ದಾರೆ. ಮುಹಮ್ಮದ್ ಆರೀಫ್ ಪಡುಬಿದಿರೆ (ವಿಜಯ ಕರ್ನಾಟಕ), ಜಿತೇಂದ್ರ ಕುಂದೇಶ್ವರ (ವಿಶ್ವವಾಣಿ), ಭಾಸ್ಕರ ರೈ ಕಟ್ಟ (ಸುದ್ದಿ ಬಿಡುಗಡೆ), ರಘುರಾಮ ನಾಯಕ್ (ಹೊಸದಿಗಂತ) ಮತ್ತು ಪತ್ರಿಕಾ ಛಾಯಾಗ್ರಾಹಕ ಸತೀಶ್ ಇರಾ (ಉದಯವಾಣಿ) ಇವರು ಗೌರವ ಸನ್ಮಾನಕ್ಕೆ ಆಯ್ಕೆಯಾದವರು. ಗೌರವ ಪುರಸ್ಕಾರ 10 ಸಾವಿರ ರೂ. ನಗದು, ಪ್ರಶಸ್ತಿ ಫಲಕ, ಸ್ಮರಣಿಕೆ ಒಳಗೊಂಡಿದೆ. ಜ. 26 ರಂದು ಬೆಳಗ್ಗೆ 10ರಿಂದ ನಗರದ ಮೋರ್ಗನ್ಸ್ ಗೇಟ್ ಬಳಿಯ "ಪಾಲೆಮಾರ್ ಗಾರ್ಡನ್"ನಲ್ಲಿ ನಡೆಯಲಿರುವ ಮಂಗಳೂರು ಪ್ರೆಸ್ ಕ್ಲಬ್ ದಿನಾಚರಣೆಯಂದು ಗೌರವ ಸನ್ಮಾನ ನೀಡಲಾಗುವುದೆಂದು ಮಂಗಳೂರು ಪ್ರೆಸ್ ಕ್ಲಬ್‌ನ ಪ್ರಧಾನ ಕಾರ್ಯದರ್ಶಿ ಇಬ್ರಾಹಿಂ ಅಡ್ಕಸ್ಥಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಂಗಳೂರಿನ ಜನತೆಗೆ ಕಲುಷಿತ ನೀರು–ಐವನ್ ಡಿಸೋಜ



ಮಂಗಳೂರು: ಮಹಾನಗರಕ್ಕೆ ಪೂರೈಕೆಯಾಗುತ್ತಿರುವ ನೀರು ಕಲುಷಿತವಾಗಿದೆ. ಎಸ್‌ಟಿಪಿಗಳು ನೀರಿನ ಮೂಲವನ್ನು ಸೇರುತ್ತಿದ್ದು ಕೊಳಚೆ ನೀರನ್ನೇ ಜನರಿಗೆ ಪೂರೈಕೆ ಮಾಡಲಾಗುತ್ತಿದೆ ಎಂದು ವಿಧಾನ ಪರಿಷತ್ ಶಾಸಕ ಐವನ್ ಡಿಸೋಜ ಆರೋಪಿಸಿದ್ದಾರೆ. ಅವರು ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ಈಗಾಗಲೇ ಎರಡು ಬಾರಿ ಮನವಿ ಮಾಡಿ ಸದನದ ಬಾವಿಗಿಳಿದರೂ ಪ್ರಯೋಜನವಾಗಿಲ್ಲ. ಸತ್ಯಶೋಧನಾ ಸಮಿತಿ ರಚಿಸುವುದಕ್ಕೂ ಪಾಲಿಕೆಯ ಆಡಳಿತ ಮುಂದಾಗಿಲ್ಲ. ಹೀಗಾಗಿ ನಾವೇ ಸಮಿತಿ ರಚಿಸಿ ತನಿಖೆ ಮಾಡಿದ್ದೇವೆ. ಎಲ್ಲಿ ಎಸ್ ಟಿಪಿ ಕೊಳಚೆ ನೀರು ಸೇರುತ್ತಿದೆಯೋ ಅಲ್ಲಿ ಹೋಗಿ ಪ್ರತ್ಯಕ್ಷ ವರದಿ ತಯಾರಿಸಿ ಅದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳೂರು ಭೇಟಿಯ ಸಂದರ್ಭದಲ್ಲಿ ನೀಡಿದ್ದೇವೆ ಎಂದರು.

## ಖುಷಿಯಿಂದ ಕುಣಿದಾಡಿದ ಭಿನ್ನ ಸಾಮರ್ಥ್ಯದ ಮಕ್ಕಳು



ಮಂಗಳೂರು: ಸೇವಾ ಭಾರತಿಯ ಅಂಗಸಂಸ್ಥೆಯಾದ ಆಶಾ ಜ್ಯೋತಿಯು ಕೆನರಾ ಶಿಕ್ಷಣ ಸಮೂಹ ಸಂಸ್ಥೆಯ ಸಹಯೋಗದಲ್ಲಿ ಭಿನ್ನ ಸಾಮರ್ಥ್ಯದ ಮಕ್ಕಳಿಗೆ ನಗರದ ಡೊಂಗರಕೇರಿಯ ಕೆನರಾ ಪ್ರೌಢಶಾಲಾ ಆವರಣದಲ್ಲಿ ಆಯೋಜಿಸಿದ್ದ ವಿಶಿಷ್ಟ ಮೇಳದಲ್ಲಿ ಭಿನ್ನ ಸಾಮರ್ಥ್ಯದ ಮಕ್ಕಳು ಖುಷಿಯಾಗಿ ನಲಿದು ಸಂಭ್ರಮಿಸಿದರು. ಭಿನ್ನ ಸಾಮರ್ಥ್ಯದ ಮಕ್ಕಳು ಮತ್ತವರ ಪೋಷಕರು ಪರಸ್ಪರ ವಿಚಾರ ವಿನಿಮಯ ಮಾಡಿಕೊಂಡರು. ಮೇಯರ್ ಮನೋಜ್ ಕುಮಾರ್ ಕೋಡಿಕಲ್ ವಿಶಿಷ್ಟ ಮೇಳವನ್ನು ಉದ್ಘಾಟಿಸಿದರೆ, ಆಶಾಜ್ಯೋತಿಯ ಗೌರವಾಧ್ಯಕ್ಷ ಡಾ.ವಿ. ಮುರಳೀಧರ ನಾಯಕ್, ಲಂಚುಲಾಲ್, ಅಧ್ಯಕ್ಷೆ ಗೀತಾ ಲಕ್ಷ್ಮೀಶ್, ಕಲ್ಲಡ್ಕ ಪ್ರಭಾಕರ ಭಟ್ ಉಪಸ್ಥಿತರಿದ್ದರು. ಕೆನರಾ ಶಾಲೆಯ ಆವರಣವನ್ನು ಜಾತ್ರೆಯಂತೆ ಸಜ್ಜುಗೊಳಿಸಿದ್ದು ವಿಶೇಷವಾಗಿತ್ತು. ಬಿಸಿಲನ್ನೂ ಲೆಕ್ಕಿಸದೆ ಮಕ್ಕಳು ಪೋಷಕರ ಸಹಿತ ಸಾವಿರಾರು ಮಂದಿ ಮೇಳದಲ್ಲಿ ಪಾಲ್ಗೊಂಡಿದ್ದರು.

## ಕಣ್ಮನ ಸೆಳೆದ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ



ಮಂಗಳೂರು: ಕರಾವಳಿ ಉತ್ಸವ ಹಿನ್ನೆಲೆಯಲ್ಲಿ ಒಎನ್ ಜಿಸಿ–ಎಂಆರ್ ಪಿಎಲ್ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವಕ್ಕೆ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಅವರು ತಣ್ಣೀರು ಬಾವಿ ಕಡಲಕಿನಾರೆಯಲ್ಲಿ ಚಾಲನೆ ನೀಡಿದರು. ಆಕಾಶದಲ್ಲಿ ಕುದುರೆ, ಕೋಳಿಯಿಂದ ಪ್ರಾರಂಭವಾಗಿ ಪರಿವಾಳಗಳವರೆಗೆ ಹಾರಾಡಿದರೆ, ಸ್ಥಳಿಯ ಪ್ರವಾಸಿಗರು ಅಲ್ಲೇ ಮಾರುತ್ತಿದ್ದ ಗಾಳಿಪಟವನ್ನು ಹಾರಿಸಿ ಖುಷಿ ಪಡುತ್ತಿರುವುದು ಕಾಣುತ್ತಿತ್ತು. ಗಾಳಿಪಟ ಉತ್ಸವದಲ್ಲಿ ಗ್ರೀಸ್, ಯುಕೆ, ಜರ್ಮನಿ, ಇಂಡೋನೇಷ್ಯಾ, ನೆದರ್ ಲ್ಯಾಂಡ್, ಎಸ್ಟಿನೋವಾ ಮಾತ್ರವಲ್ಲದೆ ದೇಶದ ವಿವಿಧ ರಾಜ್ಯಗಳಿಂದ ನುರಿತ ಗಾಳಿಪಟ ಹಾರಾಟಗಾರರು ಪಾಲ್ಗೊಳ್ಳುತ್ತಿರುವುದು ವಿಶೇಷವಾಗಿದೆ. ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್, ಮುಡಾ ಅಧ್ಯಕ್ಷ ಸದಾಶಿವ ಉಳ್ಳಾಲ್, ಎಂಆರ್‌ಪಿಎಲ್ ನಿರ್ದೇಶಕ ನಂದಕುಮಾರ್, ಮೇಯರ್ ಮನೋಜ್ ಕುಮಾರ್, ಮನಪಾ ವಿಪಕ್ಷ ನಾಯಕ ಅನಿಲ್ ಕುಮಾರ್, ಟೀಮ್ ಮಂಗಳೂರಿನ ಸರ್ವೇಶ್ ರಾವ್ ಮತ್ತಿತರರು ಉಪಸ್ಥಿತರಿದ್ದರು.

## ಅದ್ದೂರಿ ಸ್ಟ್ರೀಟ್‌ಫುಡ್ ಫಿಯೆಸ್ಟ ಸೀಸನ್–3



ಮಂಗಳೂರು: ಕುಡ್ಲ ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ದ.ಕ ಜಿಲ್ಲಾಡಳಿತದ ಸಹಕಾರದೊಂದಿಗೆ ಆರಂಭಗೊಂಡ ಮಂಗಳೂರಿನ ಸ್ಟ್ರೀಟ್ ಫುಡ್ ಫಿಯೆಸ್ಟ ಸೀಸನ್–3 ಗೆ ನಗರದ ಬ್ರಹ್ಮಶ್ರೀ ನಾರಾಯಣಗುರು ವೃತ್ತದ ಬಳಿ ನಿರ್ಮಿಸಿದ್ದ ಅದ್ದೂರಿ ವೇದಿಕೆಯಲ್ಲಿ ನಳಿನ್ ಕುಮಾರ್ ಕಟೀಲ್ ಹಾಗೂ ಶಾಸಕ ವೇದವ್ಯಾಸ್ ಕಾಮತ್ ಅವರ ಉಪಸ್ಥಿತಿಯೊಂದಿಗೆ ಅಧಿಕೃತ ಚಾಲನೆ ದೊರೆಯಿತು. ಭಾರೀ ನಿರೀಕ್ಷೆ ಮೂಡಿಸಿದ್ದ ಚಾಯ್ ವಾಲಾ ಡಾಲಿರವರು ಉದ್ಘಾಟನಾ ವೇದಿಕೆಯಲ್ಲೇ ತಮ್ಮ ಎಂದಿನ ಶೈಲಿಯಲ್ಲಿ ಚಹಾ ತಯಾರಿಸಿ ಗಣ್ಯರಿಗೆ ನೀಡುತ್ತಿದ್ದರೆ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ಜನರು ಸೆಲ್ಫಿಗೆ ಮುಗಿ ಬೀಳುತ್ತಿದ್ದರು. ವಾರಾಂತ್ಯದ ಹಿನ್ನೆಲೆಯಲ್ಲಿ ಮೊದಲ ದಿನವೇ ಅತ್ಯಂತ ಹೆಚ್ಚಿನ ಸಂಖ್ಯೆಯಲ್ಲಿ ಕುಟುಂಬ ಸಮೇತ ಸೇರಿದ್ದ ಜನರು ವಿವಿಧ ಆಹಾರ ಮಳಿಗೆಗಳಿಗೆ ಭೇಟಿ ನೀಡಿ ಸಂಭ್ರಮಿಸಿದರು.

## ಪೊಲೀಸರಿಗೆ ಯು.ಟಿ.ಖಾದರ್ ಅಭಿನಂದನೆ



ಮಂಗಳೂರು: ತಲಪಾಡಿಯ ಕೋಟೆಕಾರು ಸಹಕಾರಿ ಸಂಘದಲ್ಲಿ ಹಾಡುಹಗಲೇ ದರೋಡೆಗೈದ ಆರೋಪಿಗಳ ಜಾಡು ಹಿಡಿದು ತಮಿಳುನಾಡಿನಲ್ಲಿ ಕ್ಷಿಪ್ರವಾಗಿ ಬಂಧಿಸಿರುವ ಪೊಲೀಸರ ದಿಟ್ಟ ಕ್ರಮ ಶ್ಲಾಘನಾರ್ಹವಾದುದು ಎಂದು ಸ್ಪೀಕರ್ ಯು.ಟಿ.ಖಾದರ್ ಅವರು ಪೊಲೀಸ್ ಇಲಾಖೆಗೆ ಅಭಿನಂದನೆ ಸಲ್ಲಿಸಿದ್ದಾರೆ. ದರೋಡೆಯಾದ ಅಲ್ಪಾವಧಿಯಲ್ಲೇ ಬಂಧಿಸಿರುವುದರಿಂದ ಪೊಲೀಸರ ಮೇಲಿನ ವಿಶ್ವಾಸ ಮತ್ತು ನಂಬಿಕೆ ಇಮ್ಮಡಿಯಾಗಿದೆ. ಪೊಲೀಸರ ಶ್ರಮಕ್ಕೆ ಕೃತಜ್ಞತೆಗಳು. ಇದೇ ರೀತಿ ಬಂಟ್ವಾಳ ನಾರ್ಶದ ಸಿಂಗಾರಿ ಬೀಡಿ ಉದ್ಯಮಿ ಸುಲೈಮಾನ್ ಹಾಜಿ ಅವರ ಮನ ದರೋಡೆ ಪ್ರಕರಣದಲ್ಲೂ ಆರೋಪಿಗಳು ಶೀಘ್ರ ಪೊಲೀಸ್ ಬಲೆಗೆ ಬೀಳಲಿದ್ದಾರೆ. ಇದರ ತನಿಖೆಯಲ್ಲಿ ಬಹಳಷ್ಟು ಪ್ರಗತಿ ಕಂಡು ಬಂದಿದೆ ಎಂದು ಯು.ಟಿ. ಖಾದರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲೆಗೆ ಅವಮಾನಿಸಿದ್ದು ಕಾಂಗ್ರೆಸ್ಸಿನ ಹೀನ ಮನಸ್ಥಿತಿ–ಕಾಮತ್



ಮಂಗಳೂರು: ಧಾರ್ಮಿಕ ನೆಲೆಗಟ್ಟಿನ ಮೇಲೆ ಅನಾದಿ ಕಾಲದಿಂದಲೂ ಯಾವುದೇ ಅಡ್ಡಿ–ಆತಂಕಗಳಿಲ್ಲದೇ ನಿರಂತರವಾಗಿ ನಡೆದು ಬಂದಂತಹ ಗಂಡುಕಲೆಯಾದ ಯಕ್ಷಗಾನವನ್ನು ಪೊಲೀಸರ ಮೂಲಕ ಅರ್ಧಕ್ಕೆ ನಿಲ್ಲಿಸುವ ಮೂಲಕ ಕಲೆಗೆ ಅವಮಾನಿಸಲು ಯತ್ನಿಸಿರುವುದು ಕಾಂಗ್ರೆಸ್ಸಿನ ಹೀನ ಮನಸ್ಥಿತಿಗೆ ಹಿಡಿದ ಕೈಗನ್ನಡಿ, ಕಾರ್ಕಳದಲ್ಲಿ ಸಂಕ್ರಾಂತಿಯ ಪ್ರಯುಕ್ತ ಸಾರ್ವಜನಿಕ ಸತ್ಯನಾರಾಯಣ ಪೂಜೆಯ ಸಂದರ್ಭದಲ್ಲಿ ಆಯೋಜಿಸಲಾಗಿದ್ದ ಯಕ್ಷಗಾನ ಪ್ರದರ್ಶನಕ್ಕೆ ಸ್ಥಳೀಯ ಕಾಂಗ್ರೆಸ್ ನಾಯಕನ ಫೋನ್ ಕರೆಯ ದೂರಿನ ಮೇರೆಗೆ ಸ್ಥಳಕ್ಕೆ ಬಂದ ಪೊಲೀಸರು ಯಕ್ಷಗಾನವನ್ನು ನಿಲ್ಲಿಸುವಂತೆ ಸೂಚಿಸಿ, ಆಯೋಜಕರನ್ನು ಬಂಧಿಸಲು ಮುಂದಾಗಿದ್ದು ಖಂಡನೀಯ ಎಂದು ಶಾಸಕ ವೇದವ್ಯಾಸ್ ಕಾಮತ್ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.



# ಕರಾವಳಿ ತರಂಗಿಣಿ ಸಿನಿ ತರಂಗಿಣಿ

## ಸಾ ರಾ ಗೋವಿಂದು ಅವರಿಗೆ ಅಭಿನಂದನೆ..



ಕನ್ನಡಪರ ಹೋರಾಟಗಾರ, ಹಿರಿಯ ಚಲನ ಚಿತ್ರ ನಿರ್ಮಾಪಕ ಸಾರಾ ಗೋವಿಂದು ಅವರಿಗೆ ಜನವರಿ 24ರಂದು ಅಭಿನಂದನಾ ಕಾರ್ಯಕ್ರಮ ನಡೆಯಲಿದೆ. ಸಾರಾ ಗೋವಿಂದು ಅಭಿನಂದನಾ ಸಮಿತಿಯವರ ಮೂಲಕ ಸನ್ಮಾನ ಕಾರ್ಯಕ್ರಮ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸಾರಾ ಗೋವಿಂದು ಅವರಿಗೆ ಸನ್ಮಾನ ಮಾಡಲಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮ ನಿಗದಿಯಾಗಿದೆ. ಅಂದು ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಲಿರುವುದು ಹಿರಿಯ ಸಾಹಿತಿ, ನಿರ್ದೇಶಕ ಬರಗೂರು ರಾಮಚಂದ್ರಪ್ಪ. ಕಾರ್ಯಕ್ರಮವನ್ನು ಡಿಸಿಎಂ ಡಿಕೆ ಶಿವಕುಮಾರ್ ಉದ್ಘಾಟನೆ ಮಾಡಲಿದ್ದರೆ. ಅಭಿನಂದನಾ ಗ್ರಂಥವನ್ನು ಹಿರಿಯ ಸಾಹಿತಿ ಗೊರು ಚನ್ನಬಸಪ್ಪ ಬಿಡುಗಡೆ ಮಾಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆ ವಹಿಸಲಿರುವುದು ಹಂಪ ನಾಗರಾಜಯ್ಯನವರು.

## ‘ಲ್ಯಾಂಡ್ ಲಾರ್ಡ್’ ದುನಿಯಾ ವಿಜಯ್ ಹುಟ್ಟುಹಬ್ಬ



ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರು ನಾಯಕರಾಗಿ ನಟಿಸಿದ್ದ “ಸಾರಥಿ” ಚಿತ್ರವನ್ನು ನಿರ್ಮಿಸಿದ್ದ ಕೆ ವಿ ಸತ್ಯಪ್ರಕಾಶ್ ಅವರು ಹನ್ನೆರಡು ವರ್ಷಗಳ ನಂತರ “ಸಾರಥಿ ಫಿಲಂಸ್” ಮೂಲಕ ನೂತನ ಚಿತ್ರ ನಿರ್ಮಾಣಕ್ಕೆ ಮುಂದಾಗಿದ್ದಾರೆ. ನಿರ್ಮಾಣಕ್ಕೆ ಸತ್ಯಪ್ರಕಾಶ್ ಅವರ ಪುತ್ರ ಸೂರಜ್ ಗೌಡ ಅವರು ಸಾಥ್ ನೀಡಿದ್ದಾರೆ. “ಜಂಟಲ್ ಮ್ಯಾನ್”, “ಗುರುಶಿಷ್ಯರು” ಚಿತ್ರಗಳ ನಿರ್ದೇಶಕ, “ಕಾಟೇರ” ಚಿತ್ರದ ಲೇಖಕ ಜಡೇಶ ಕೆ ಹಂಪಿ ನಿರ್ದೇಶನದ ಹಾಗೂ ವಿಜಯ್ ಕುಮಾರ್(ದುನಿಯಾ ವಿಜಯ್) ನಾಯಕರಾಗಿ ನಟಿಸುತ್ತಿರುವ ಚಿತ್ರ “ಲ್ಯಾಂಡ್ ಲಾರ್ಡ್”. ಚಿತ್ರದ ಚಿತ್ರೀಕರಣ ನೆಲಮಂಗಲದ ಬಳಿ ನಿರ್ಮಿಸಿ ಚಿತ್ರೀಕರಣ ನಡೆಸಲಾಗುತ್ತಿದೆ. ಇದೆ ಸೆಟ್‌ನಲ್ಲಿ ನಾಯಕ ದುನಿಯಾ ವಿಜಯ್ ಅವರ ಹುಟ್ಟುಹಬ್ಬವನ್ನು ಚಿತ್ರತಂಡ ಆಚರಣೆ ಮಾಡಿದೆ.

## ಲಿಖಿತ್ ಶೆಟ್ಟಿಯವರ ಫುಲ್ ಮೀಲ್ಸ್ ರಡಿ..

ಲಿಖಿತ್ ಶೆಟ್ಟಿ ನಾಯಕನಾಗಿ, ಖುಷಿ ರವಿ ಮತ್ತು ತೇಜಸ್ವಿನಿ ಶರ್ಮ ನಾಯಕಿಯರಾಗಿ ನಟಿಸುತ್ತಿರುವ ‘ಫುಲ್ ಮೀಲ್ಸ್’ ಸಿನೆಮಾದ ಟ್ರೈಲರ್ ಶೀಘ್ರದಲ್ಲೇ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ತಿಳಿಸಿದೆ. ಸಿನೆಮಾದ ನಾಯಕಿ ಖುಷಿ ರವಿ ಹುಟ್ಟುಹಬ್ಬದ ಪ್ರಯುಕ್ತ ಸಣ್ಣ ತುಣುಕೊಂದನ್ನು ಬಿಡುಗಡೆ ಮಾಡಿರುವ ಚಿತ್ರತಂಡ ವೀಡಿಯೋ ಕೊನೆಯಲ್ಲಿ ಶೀಘ್ರದಲ್ಲೇ ಟ್ರೈಲರ್ ಬರಲಿದೆ ಎಂದು ತಿಳಿಸಿದ್ದಾರೆ. ಈ ಹಿಂದೆ ಸಂಕಷ್ಟಕರ ಗಣಪತಿ, ಫ್ಯಾಮಿಲಿ ಪ್ಯಾಕ್ ಮತ್ತು ಅಬ್ಬಬ್ಬ ಸಿನೆಮಾಗಳ ಮೂಲಕ ಸಾಕಷ್ಟು ಖ್ಯಾತಿಯನ್ನು ಪಡೆದಿದ್ದ ನಾಯಕ ನಟ ಲಿಖಿತ್ ಶೆಟ್ಟಿ ಈಗ ಮತ್ತೊಮ್ಮೆ ವಿಶೇಷವಾದ ಕಥೆಯೊಂದಿಗೆ ಬರುತ್ತಿದ್ದಾರೆ. ಮೊದಲ ಬಾರಿ ಪೂರ್ಣಪ್ರಮಾಣದ ನಿರ್ಮಾಣದ ಜವಾಬ್ದಾರಿಯನ್ನು ವಹಿಸಿಕೊಂಡಿದ್ದು, ಶೀಘ್ರದಲ್ಲೇ ಸಿನೆಮಾ ಬಿಡುಗಡೆ ಮಾಡುವ ಆಲೋಚನೆಯಲ್ಲಿದ್ದು ಟ್ರೈಲರ್‌ನೊಂದಿಗೆ ಬಿಡುಗಡೆಯ ದಿನಾಂಕವನ್ನು ಕೂಡ ಪ್ರಕಟಿಸುವುದಾಗಿ ತಿಳಿಸಿದ್ದಾರೆ.



## ಜನವರಿ 31ಕ್ಕೆ ‘ನೋಡಿದವರು ಏನಂತಾರೆ’

ಉತ್ತರ ಕರ್ನಾಟಕದ ಅಪ್ಪಟ ಪ್ರತಿಭೆ ನವೀಶ್ ಶಂಕರ್ ಕಥೆಗಳ ಆಯ್ಕೆಗಳೇ ವಿಭಿನ್ನ. ಪ್ರತಿ ಸಿನಿಮಾದಲ್ಲಿಯೂ ತಾವು ಎಂಥ ನಟ ಅನ್ನೋದನ್ನು ಸಾಬೀತುಪಡಿಸಿಕೊಂಡು ಬರುತ್ತಿರುವ ನವೀನ್ ಈಗ ಕಾಡುವ ಕಥೆಯೊಂದಿಗೆ ಚಿತ್ರಮಂದಿರಕ್ಕೆ ಬರುತ್ತಿದ್ದಾರೆ. ಕುಲದೀಪ್ ಕಾರಿಯಪ್ಪ ಸಾರಥ್ಯದ ನೋಡಿದವರು ಏನಂತಾರೆ ಸಿನಿಮಾದಲ್ಲಿ ನವೀನ್ ಅಕ್ಷರಶಃ ಜೀವಿಸಿದ್ದಾರೆ. ಅದಕ್ಕೆ ಬಿಡುಗಡೆಯಾಗಿರುವ ಟ್ರೇಲರ್ ಉದಾಹರಣೆ. ಬಹುಮುಖ ಪ್ರತಿಭೆ ಸಾಧು ಕೋಕಿಲಾ, ಹಿರಿಯ ಪತ್ರಕರ್ತರಾದ ಜೋಗಿ ನೋಡಿದವರು ಏನಂತಾರೆ ಟ್ರೇಲರ್ ಬಿಡುಗಡೆ ಮಾಡಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿದರು. ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಟ್ರೇಲರ್ ಅನಾವರಣ ಕಾರ್ಯಕ್ರಮದಲ್ಲಿ ಇಡೀ ಚಿತ್ರತಂಡ ಭಾಗಿಯಾಗಿತ್ತು. ಪ್ರೀತಿ, ಸ್ನೇಹ, ತ್ಯಾಗ, ಸೆಂಟಿಮೆಂಟ್ ಇರುವ ಸಿನಿಮಾ ಇದೇ ತಿಂಗಳ 31ರಂದು ಬಿಡುಗಡೆಯಾಗಲಿದೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, ‘A’ 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212